# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 179 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 04–02–2025 ಮಂಗಳವಾರ | ಪುಟ: 4 | ಬೆಲೆ : ರೂ.2–00

Volume - 02 Issue - 179 | RNI No: KARKAN/2023/88462 | KA/SK/CTA-874/2024-2026 | Chitradurga | Date: 04-02-2025 Tuesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸಭೆಗೆ ಸಂಪೂರ್ಣ ಮಾಹಿತಿಯೊಂದಿಗೆ ಬನ್ನಿ: ಶಾಸಕ ರಘುಮೂರ್ತಿ ಸೂಚನೆ 2

ಫೆ.10ರಂದು ಕಾಯಕ ಶರಣರ ಜಯಂತಿ: ಅರ್ಥಪೂರ್ಣ ಆಚರಣೆಗೆ ಸೂಚನೆ 3

ಮನೆಯಿಂದ ಸಂಸ್ಕಾರ ಕಲಿತು ಬಂದ ಮಗು ಶಿಕ್ಷಣದಲ್ಲಿ ದಾಪುಗಾಲು ಹಾಕುತ್ತದೆ: ಕಿರಣ್ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಹಾಲಗೊಂಡನಹಳ್ಳಿ ದಿಢೀರ್ ಕಾಣಿಸಿಕೊಂಡ ಬೆಂಕಿಗೆ 10ಗುಡಿಸಲು ಭಸ್ಮ



» **ಚಳ್ಳಕೆರೆ**

ತಾಲ್ಲೂಕಿನ ಚನ್ನಮ್ಮನಾಗತಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಾಲಗೊಂಡನಹಳ್ಳಿ ಗ್ರಾಮದಲ್ಲಿ ಸೋಮವಾರ ಮಧ್ಯಾಹ್ನ ಸರ್ಕಾರಿ ಗೋಮಾಳದಲ್ಲಿ ವಾಸವಿದ್ದ ಸುಮಾರು 10 ಗುಡಿಸಲುಗಳಿಗೆಆಕಸ್ಮಿಕವಾಗಿಬೆಂಕಿಬಿದ್ದಪರಿಣಾಮ ಗುಡಿಸಲುಗಳು ಸಂಪೂರ್ಣ ಸುಟ್ಟುಹೋಗಿವೆ. ಅಗ್ನಿ ಆಕಸ್ಮಿಕತೆ ಕಾರಣ ತಿಳಿದುಬಂದಿಲ್ಲ, ಮಧ್ಯಾಹ್ನ ದಿಢೀರ ಬೆಂಕಿಕಾಣಿಸಿಕೊಂಡ ಕೂಡಲೇ ನೆರೆಹೊರೆಯವರು ದಾವಿಸಿಬಂದು ಬೆಂಕಿ ನಂದಿಸಲು ಪ್ರಯತ್ನಿಸಿದ್ದಾರೆ. ಅಗ್ನಿಶಾಮಕ ಪಡೆದ ಸ್ಥಳಕ್ಕೆ ಆಗಲಿಸಿ ಕೆಲವಾರು ಗಂಟೆಗಳ ಕಾಲ ಕಾರ್ಯಚರಣೆ ನಡೆಸಿ ಬೆಂಕಿಯನ್ನು ಹತೋಟಿಗೆ ತಂದಿದ್ದಾರೆ. ನಷ್ಟದ ಅಂದಾಜು ಲಭ್ಯವಿಲ್ಲ. ಸ್ಥಳಕ್ಕೆ ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಚನ್ನಕೇಶವಸ್ವಾಮಿ ದೇವಸ್ಥಾನ ಹುಂಡಿ ಏಣಿಕೆ: 41345ರೂ ಸಂಗ್ರಹ



» **ಚಳ್ಳಕೆರೆ**

ತಾಲ್ಲೂಕಿನ ಪರಶುರಾಮಪುರ ಗ್ರಾಮದ ಚನ್ನಕೇಶವಸ್ವಾಮಿ ದೇವಸ್ಥಾನದ ಹುಂಡಿಹಣ ಏಣಿಕೆ ಕಾರ್ಯ ಸೋಮವಾರ ತಹಶೀಲ್ದಾರ್ ಸೂಚನೆ ಮೇರೆಗೆ ನಡೆಸಲಾಯಿತು. ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಭಕ್ತರ ಸಮ್ಮುಖದಲ್ಲಿ ಹುಂಡಿ ಏಣಿಕೆ ಕಾರ್ಯ ಸುಗಮವಾಗಿ ನಡೆಯಿತು. ದೇವಸ್ಥಾನದ ಹುಂಡಿಯಲ್ಲಿ 38970 ನೋಟುಗಳು, 2375 ಚಿಲ್ಲರೆ 41345 ಹಣ ಸಂಗ್ರಹವಾಗಿರುತ್ತದೆ.

### ಇಂದು ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಸಭೆ

» **ಚಿತ್ರದುರ್ಗ**

ಇತ್ತೀಚಿಗೆ ಮೈಕ್ರೋಫೈನಾನ್ಸ್, ಲೇವಾದೇವಿ, ಗಿರವಿ ಹಣಕಾಸು ಸಂಸ್ಥೆಗಳಿಂದ ತನ್ನ ಸಾಲಗಾರರಿಗೆ ಅತಿಯಾಗಿ ಬಡ್ಡಿ ವಿಧಿಸುತ್ತಿರುವುದು ಹಾಗೂ ಸಾಲ ವಸೂಲಾತಿ ಸಮಯದಲ್ಲಿ ಸಾಲಗಾರರಿಗೆ ಕಿರುಕುಳ ನೀಡುತ್ತಿರುವುದು ಕಂಡುಬಂದಿರುವುದರಿಂದ, ಈ ಬಗ್ಗೆ ಕ್ರಮ ಕೈಗೊಳ್ಳಲು ಫೆ.04ರಂದು ಸಂಜೆ 4ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮೈಕ್ರೋಫೈನಾನ್ಸ್ ಸಂಸ್ಥೆಗಳ ಸಭೆ ನಿಗಧಿಪಡಿಸಲಾಗಿದೆ.

# ಭರಮಸಾಗರದಲ್ಲಿ ಇಂದಿನಿಂದ ತರಳಬಾಳು ಹುಣ್ಣಿಮೆ ಮಹೋತ್ಸವ

» **ಚಿತ್ರದುರ್ಗ**

ಸಿರಿಗೆರೆಯ ತರಳಬಾಳು ಜಗದ್ಗುರು ಬೃಹನ್ಮಠದಿಂದ ಕಳೆದ 76 ವರ್ಷಗಳಿಂದ ನಾಡಿನ ಒಳ ಹೊರಗೆ ನಡೆಸಿಕೊಂಡು ಬಂದಿರುವ ವಾರ್ಷಿಕ ಸಮಾರಂಭ ತರ ಒಂದು ನಾಡ ಹಬ್ಬವಾಗಿ ಸರ್ವ ಜನಾದಾರಣೆಯನ್ನು ಗಳಿಸಿರುವ, ಜಾತಿ, ಮತ, ಪ್ರಾಂತ್ಯ ಪ್ರದೇಶಗಳ ಬೇದವಿಲ್ಲದೆ ಎಲ್ಲರನ್ನ ಸದ್ಧರ್ಮದ ಬೆಸುಗೆಯಲ್ಲಿ ಒಗ್ಗೂಡಿಸುವ ತರಳಬಾಳು ಹುಣ್ಣಿಮೆ ಮಹೋತ್ಸವವು ಈ ಬಾರಿ ಚಿತ್ರದುರ್ಗ ಜಿಲ್ಲೆಯ ಭರಮಸಾಗರದಲ್ಲಿ ಫೆ.4ರಿಂದ 12ರ ವರೆಗೆ 9 ದಿನಗಳ ಕಾಲ ಡಾ. ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿಯವರ ಸಾನಿಧ್ಯದಲ್ಲಿ ಜರುಗಲಿದೆ.

ಫೆ.4ರ ಮಂಗಳವಾರ ಸಂಜೆ 6:30ಕ್ಕೆ ಶಿಕ್ಷಣ–ಕಲೆ–ಸಂಸ್ಕೃತಿ ವಿಷಯದ ಅಥಿತಿಗಳಾಗಿ ಶ್ರೀ ಸ್ವಾಮಿ ನಿರ್ಭಯಾನಂದ ಸರಸ್ವತಿ ಸ್ವಾಮಿಗಳು, ಎಂ.ಬಿ.ಪಾಟೀಲ್, ಮಧುಬಂಗಾರಪ್ಪ, ಡಿ.ಸುಧಾಕರ್, ಡಾ.ಎಂ. ಚಂದ್ರಪ್ಪ, ಟಿ.ವೆಂಕಟೇಶ್, ರವಿಕುಮಾರ್, ಚಿತ್ರನಟ ಡಾಲಿ ಧನಂಜಯ್, ಕುಲಪತಿ ಬಿಡಿ ಕುಂಬಾರ ಭಾಗವಹಿಸಲಿದ್ದಾರೆ.

ಫೆ.5ರ ಬುಧವಾರ ಮಹಿಳೆ ಮತ್ತು ಸಮಾಜ ವಿಷಯದ ಅಥಿತಿಗಳಾಗಿ ಶ್ರೀ ಜಯೇಂದ್ರ ಪುರಿ ಮಹಾಸ್ವಾಮಿಗಳವರು, ಲತಾ ಮಲ್ಲಿಕಾರ್ಜುನ್, ಉಮಾಶ್ರೀ, ನಾಗಲಕ್ಷ್ಮಿ ಚೌದರಿ, ಜಿ.ಆರ್.ಜೆ.ದಿವ್ಯಪ್ರಭು, ಶಾಲಿನಿ ಶ್ರೀಶೈಲ ದೊಡ್ಡಮನಿ, ಡಾ.ನಾಗಪುಷ್ಪಲತಾ ಭಾಗವಹಿಸಲಿದ್ದು, ಡಾ.ಬಿ.ಟಿ.ಕವಿತಾ, ಎಂ.ಎಸ್.ಆಶಾದೇವಿ, ಹಾಸ್ಯ ಭಾಷಣಕಾರರಾದ ಸಂಧ್ಯಾಶೇಣೈ ಉಪನ್ಯಾಸ ನೀಡಲಿದ್ದಾರೆ.




ಫೆ.6ರ ಗುರುವಾರ ರಾಜಕಾರಣ ಮತ್ತು ಸಮಾಜದ ವಿಷಯದ ಅತಿಥಿಗಳಾಗಿ ಮೌಲಾನ ಬಿ.ಎ ಇಬ್ರಾಹಿಂ ಸಖಾಫಿ, ಬಿ.ವೈ.ವಿಜಯೇಂದ್ರ, ಗೋವಿಂದಕಾರಜೋಳ, ಕೆ.ಆರ್. ರಮೇಶ್‌ಕುಮಾರ್, ಮುಖ್ಯಮಂತ್ರಿಚಂದ್ರು, ಬಿ.ಜಿ.ಗೋವಿಂದಪ್ಪ, ಎಸ್. ಎಲ್.ಬೋಜೇಗೌಡ, ಕೆ.ಎಸ್.ಬಸವಂತಪ್ಪ, ಎಚ್.ಕೆ.ಸುರೇಶ್ ಭಾಗವಹಿಸಲಿದ್ದು, ಎಚ್.ಡಿ.ತಮ್ಮಯ್ಯ, ವೀರೇಂದ್ರ ಪಪ್ಪಿ, ಬಿ.ದೇವೇಂದ್ರಪ್ಪ, ಧನಂಜಯ ಸರ್ಜಿ, ಪ್ರಕಾಶ್ ಕೋಳಿವಾಡ, ಮಿಮಿಕ್ರಿ ಗೋಪಿ ಉಪನ್ಯಾಸ ನೀಡಲಿದ್ದಾರೆ.

ಫೆ.7ರ ಶುಕ್ರವಾರ ಶರಣ ಸಾಹಿತ್ಯ ಮತ್ತು ಸಮಾಜದ ವಿಷಯದ ಅಥಿತಿಗಳಾಗಿ ಧಾರವಾಡ ಶ್ರೀ ಮುರುಘಾ ಮಠದ ಶ್ರೀ ಮು.ನಿ.ಪ್ರ.ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು ಹಾಗೂ ಬೆಂಗಳೂರು ಬೇಲಿ ಮಠದ ಶ್ರೀ ಮ.ನಿ.ಪ.ಶಿವಾನುಭವ ಚರಮೂರ್ತಿ ಶಿವರುದ್ರಸ್ವಾಮೀಜಿಯವರು, ಡಾ.ಹಂಪಾ ನಾಗರಾಜಯ್ಯ, ಗೊ.ರು.ಚನ್ನಬಸಪ್ಪ, ಡಾ.ಶಿವಾನಂದ ಕಣವಿ, ಡಾ.ಮಾಂತೇಶ್‌ಬೀಳಗಿ, ಡಾ.ಬಿ.ರಾಜಶೇಖರಪ್ಪ, ಡಾ.ರಾಜಶೇಖರ ಜಮದಂಡಿ ಆಗಮಿಸಲಿದ್ದು, ಡಾ.ಮಾಂತೇಶ್‌ಬಿರಾದಾರ ಅಶೋಕ್ ದೊಮ್ಮಲೂರು ಉಪನ್ಯಾಸ ನೀಡಲಿದ್ದಾರೆ.



ಫೆ.8ರ ಶನಿವಾರ ನ್ಯಾಯಾಲಯ ಮತ್ತು ಸಮಾಜ ವಿಷಯದ ಮುಖ್ಯ ಅತಿಥಿಗಳಾಗಿ ಎನ್.ಸಂತೋಷ್ ಹೆಗಡೆ, ಪ್ರಭಾಕರಶಾಸ್ತ್ರಿ, ಕೃಷ್ಣ.ಎಸ್.ದೀಕ್ಷಿತ್, ವೇದವ್ಯಾಸಾಚಾರ್ ಶ್ರೀಶಾನಂದ ಆಗಮಿಸಲಿದ್ದಾರೆ. ಫೆ.9ರ ಭಾನುವಾರ ಆರೋಗ್ಯ ಮತ್ತು ಸಮಾಜದ ವಿಷಯದ ಅಥಿತಿಗಳಾಗಿ ಹರಿಹರದ ಶ್ರೀ ವಚನಾನಂದ ಸ್ವಾಮೀಜಿಯವರು, ಡಾ.ಶರಣಪ್ರಕಾಶ್‌ರುದ್ರಪ್ಪಪಾಟೀಲ್, ಡಾ.ಸಿ.ಎನ್.ಮಂಜುನಾಥ್, ಡಾ. ಪ್ರಭಾಮಲ್ಲಿಕಾರ್ಜುನ್, ಡಾ. ಶರಣ್‌ಪಾಟೀಲ್, ಎಂ.ಎಸ್.ದಿವಾಕರ್, ಡಾ.ಅಬ್ದುಲ್‌ಬಷೀರ್, ಕೊಗಳಿಕೊಟ್ರೇಶ್ ಆಗಮಿಸಲಿದ್ದಾರೆ.

ಫೆ.10ರ ಸೋಮವಾರ ಸಮೂಹ ಮಾಧ್ಯಮ ಮತ್ತು ಸಮಾಜ ವಿಷಯದ ಅಥಿತಿಗಳಾಗಿ ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದಪುರಿ ಸ್ವಾಮೀಜಿ, ಪಬ್ಲಿಕ್ ಟಿ.ವಿಯ ಎಚ್.ಆರ್.ರಂಗನಾಥ್, ವಿಜಯ ಕರ್ನಾಟಕ ದಿನಪತ್ರಿಕೆ ಸಂಪಾದಕರಾದ ಸುದರ್ಶನ್ ಚನ್ನಂಗಿಹಳ್ಳಿ, ಡಾ.ಬಿ.ಆರ್. ರವಿಕಾಂತ್‌ಗೌಡ, ಡಾ.ಜಿ.ಎಂ.ಗಂಗಾ ಧರಸ್ವಾಮಿ, ಬಿ.ಪಿ.ಹರೀಶ್, ಕೆ.ಎಸ್.ನವೀನ್, ಬೆಳ್ಳಿಪ್ರಕಾಶ್, ಎಚ್.ಪಿ.ರಾಜೇಶ್, ಆಗಮಿಸಲಿದ್ದು, ಟಿ.ವಿ.9ನ ರಂಗನಾಥ್ ಭಾರದ್ವಜ್, ಎಂ.ಎಸ್.ರಾಘವೇಂದ್ರ, ಯತೀಶ್‌ಚಂದ್ರ, ಎಂ.ಎಸ್.ಶರತ್ ಉಪನ್ಯಾಸ ನೀಡಲಿದ್ದಾರೆ.

ಫೆ.11ರ ಮಂಗಳವಾರ ಕೃಷಿ ಮತ್ತು ಜಲ ಸಂರಕ್ಷಣೆ ವಿಷಯದ ಅಥಿತಿಗಳಾಗಿ ಮಹಾರಾಷ್ಟ್ರ ಕನ್ನೇರಿ ಅದೃಶ್ಯ ಕಾಡುಸಿದ್ದೇಶ್ವರ ಸ್ವಾಮೀಜಿಹಾಗೂಹೆಬ್ಬಾಳ್‌ವಿರಕ್ತಮಠದಶ್ರೀ ಮಹಾಂತ ರುದ್ರೇಶ್ವರ ಸ್ವಾಮೀಜಿಯವರು, ಬಿ.ಎಸ್.ಯಡಿಯೂರಪ್ಪ, ಎನ್. ಚೆಲುವರಾಯಸ್ವಾಮಿ, ಡಾ. ರಾಜೇಂದ್ರಸಿಂಗ್, ಎಚ್.ಆರ್.ಬಸವರಾಜಪ್ಪ, ಎಚ್.ಆಂಜನೇಯ, ಟಿ.ರಘುಮೂರ್ತಿ, ಎಸ್.ವಿ.ರಾಮಚಂದ್ರಪ್ಪ, ಮಲ್ಲಿಕಾರ್ಜುನ ಗುಂಗೆ ಭಾಗವಹಿಸಲಿದ್ದಾರೆ.



**ಸಮಾರೋಪ ಸಮಾರಂಭ:** ಫೆ.12ರ ಸಮಾರೋಪ ಸಮಾರಂಭದಲ್ಲಿ ಧರ್ಮ–ವಿಜ್ಞಾನ–ಸಮಾಜ ವಿಷಯದ ಮುಖ್ಯ ಅತಿಥಿಗಳಾಗಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಡಿ.ಕೆ.ಶಿವಕುಮಾರ್, ಬಸವರಾಜ ಬೊಮ್ಮಾಯಿ, ಎಸ್.ಎಸ್.ಮಲ್ಲಿಕಾರ್ಜುನ್, ಜಿ.ಎಂ.ಸಿದ್ದೇಶ್ವರ, ಜೆ.ಸಿ.ಮಾಧುಸ್ವಾಮಿ, ಡಿ.ಜಿ.ಶಾಂತನಗೌಡ, ಯು.ಬಿ.ಬಣಕಾರ್, ಶಿವಗಂಗಾ ಬಸವರಾಜ್ ಆಗಮಿಸಲಿದ್ದು, ಡಾ. ಬಿ.ಎನ್.ಸುರೇಶ್, ಪ್ರೊ. ಎಂ.ಕೃಷ್ಣೇಗೌಡ, ಅಜಿತ್ ಹನುಮಕ್ಕನವರ್, ಡಾ.ಎಚ್.ಎಸ್.ಹರಿಶಂಕರ್, ವಿದೇಶದ ವಿದ್ವಾಂಸಕರು ಭಾಗವಹಿಸಲಿದ್ದಾರೆ.

**ರಾಜ್ಯಮಟ್ಟದ ಕುಸ್ತಿ ಹಾಗೂ ಕ್ರಿಡಾಕೂಟ ಸ್ಪರ್ಧೆಗಳ ಮೆರಗು:** ಹುಣ್ಣಿಮೆ ಮಹೋತ್ಸವದಲ್ಲಿ ರಾಜ್ಯಮಟ್ಟದ ಕುಸ್ತಿ, ಕ್ರಿಡಾಕೂಟ ಸ್ಪರ್ಧೆಗಳು, ಹಾಗೂ ಪ್ರತಿಭಾನ್ವೇಷಣೆಗಳನ್ನು ಏರ್ಪಡಿಸಿದ್ದು, ಶ್ರೀಮಠದಿಂದ ಬಹುಮಾನಗಳನ್ನು ನಿಗದಿಪಡಿಸಲಾಗಿದೆ. ಜೊತೆಗೆ ಶಾಲೆ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಸ್ಪರ್ಧೆಗಳು, ಕರ್ನಾಟಕದ ವಿವಿಧ ಜಾನಪದ ಕಲಾತಂಡಗಳ ಪ್ರದರ್ಶನಗಳು, ವಿಜ್ಞಾನ ವಸ್ತು ಪ್ರದರ್ಶನ ಇನ್ನು ಮುಂತಾದ ಕಾರ್ಯಕ್ರಮಗಳು ಸಹ ಪ್ರತಿನಿತ್ಯ ಜರುಗಲಿವೆ.

**ಸಾಮಾಜಿಕ ನೆರವು ಕಾರ್ಯಕ್ರಮಗಳು:** ಪುಸ್ತಕ ಮಳಿಗೆಗಳು, ವಸ್ತು ಪ್ರದರ್ಶನ ಮಳಿಗೆಗಳು, ಯುವ ಪ್ರತಿಭೆಗಳ ವಿಷಯ ಮಂತನದ ಜೊತೆಗೆ ಹುತಾತ್ಮ ಸೈನಿಕರ 10 ಕುಟುಂಬಗಳಿಗೆಆರ್ಥಿಕನೆರವು, ವಿಶ್ವಬಂಧು ಮರಳಸಿದ್ದ, ಬಿಸಿಲುಬೆಳದಿಂಗಳ ಕೃತಿಗಳು ಸಹ ಲೋಕಾರ್ಪಣೆಗೊಳಲಿವೆ.

ಭರಮಸಾಗರ ಕೆರೆಯಲ್ಲಿ ದೋಣಿ ವಿಹಾರ, ಮುರುಡೇಶ್ವರದಿಂದ ಬರಲಿವೆ ಯಾಂತ್ರಿಕೃತ ಬೋಟ್,

ಭರಮಸಾಗರದ ಐತಿಹಾಸಿಕ ಭರಮಣ್ಣ ನಾಯಕನ ಕೆರೆಯಲ್ಲಿ ದೋಣಿ ವಿಹಾರ ಏರ್ಪಡಿಸಲಾಗಿದ್ದು, ಮುರುಡೇಶ್ವರದಿಂದ ಯಾಂತ್ರಿಕೃತ ದೋಣಿಗಳನ್ನು ತರಿಸಲು ತೀರ್ಮಾನಿಸಲಾಗಿದೆ. ಕಾರ್ಯಕ್ರಮಕ್ಕೆ ಬರುವ ಭಕ್ತಾಗಳು ವಿಶಾಲವಾದ ಕೆರೆಯಲ್ಲಿ ದೋಣಿ/ಬೋಟ್‌ನಲ್ಲಿ ಕುಳಿತು ಸಂಚರಿಸಬಹುದಾಗಿದೆ.

ಹುಣ್ಣಿಮೆ ನಿಮಿತ್ತ ಮುರುಡೇಶ್ವರದಿಂದ 20 ಹಾಗೂ 10 ಜನರನ್ನು ಒಳಗೊಂಡ ಎರಡು ವಿಶೇಷ ಬೋಟ್‌ಗಳು ಬರಲಿದ್ದು, 9 ದಿನಗಳ ಕಾಲ ಭರಮಸಾಗರ ಕೆರೆಯಲ್ಲಿ ನೋಡುಗರ ಮನ ಸೆಳೆಯಲಿದೆ. ಜಿಲ್ಲಾ ರಕ್ಷಣಾಕಾರಿಗಳಿಂದ ಇದಕ್ಕೆ ಅನುಮತಿ ಪಡೆದಿದ್ದು, ವಯಸ್ಕರೊಬ್ಬರಿಗೆ 100 ರೂಗಳ ಹಣ ನಿಗದಿ ಮಾಡಲಾಗಿದೆ. ಭದ್ರತಾ ದೃಷ್ಟಿಯಿಂದ ಮಕ್ಕಳಿಗೆ ಪ್ರವೇಶವನ್ನು ನಿಷೇಸಲಾಗಿದೆ.

**ಭರಮಸಾಗರ ಕೆರೆಯಲ್ಲಿ ತೆಪ್ಪೋತ್ಸವ – ಶ್ರೀಗಳಿಂದ ಚಾಲನೆ:** ತರಳಬಾಳು ಡಾ.ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿಯವರು ಫೆ.4ರ ಮಂಗಳವಾರ ಸಂಜೆ 4.30ಕ್ಕೆ ಭರಮಸಾಗರ ದೊಡ್ಡ ಕೆರೆಯಲ್ಲಿ ತೆಪ್ಪೋತ್ಸವಕ್ಕೆ ಚಾಲನೆ ನೀಡಿ ದೋಣಿ ವಿಹಾರ ಮಾಡಲಿದ್ದಾರೆ. ಇದಕ್ಕಾಗಿ ಬೋಟ್‌ಗಳನ್ನು ಹೂವುಗಳಿಂದ ವಿಶೇಷವಾಗಿ ಸಿಂಗರಿಸಲಾಗುತ್ತಿದ್ದು, ಬಲೂನ್ ಡೆಕೋರೇಷನ್ ಸಹ ಇರಲಿದೆ. ತೆಪ್ಪೋತ್ಸವ ಉದ್ಘಾಟನೆಯಾದ ನಂತರ ಭಕ್ತಾದಿಗಳು 9 ದಿನಗಳ ಕಾಲ 1000 ಎಕರೆ ವಿಸ್ತೀರ್ಣದ ವಿಶಾಲ ಕೆರೆಯಲ್ಲಿ ದೋಣಿ ಸಂಚಾರದ ಅನುಭವವನ್ನು ಪಡೆಯಬಹುದಾಗಿದೆ.

**ಶ್ರೀಗಳು ಸಂಚರಿಸುವ ಮಾರ್ಗ:** ಭರಮಸಾಗರದಲ್ಲಿ ನಡೆಯುತ್ತಿರುವ ತರಳಬಾಳು ಹುಣ್ಣಿಮೆ ಮಹೋತ್ಸವಕ್ಕೆ ಫೆ.4ರ ಸೋಮವಾರ ಬೆಳಗ್ಗೆ 10 ಗಂಟೆಗೆ ಐಕ್ಯಮಂಟಪಕ್ಕೆಆಗಮಿಸಿ ಲಿಂ.ಶಿವಕುಮಾರ ಶ್ರೀಗಳ ಹಾಗೂ ಗುರುಶಾಂತೇಶ್ವರ ಶ್ರೀಗಳ ಕರ್ತೃ ಗದ್ದಿಗೆಗೆ ಪುಷ್ಪ ನಮನ ಸಲ್ಲಿಸಿ, ನಂತರ ಒಬ್ಬವ್ವನಾಗತಿಹಳ್ಳಿ, ಸಿರಿಗೆರೆ ಸರ್ಕಲ್, ಚಿಕ್ಕಬೆನ್ನೂರು, ಕೊಳಹಾಳ್, ಬೇಡರಶಿವನಕೆರೆ, ಬಸವನಶಿವನಕೆರೆ, ಹಿರೇಕಬ್ಬಿಗೆರೆ, ಚಿಕ್ಕಕಬ್ಬಿಗೆರೆ, ಮುದ್ದಾಪುರ, ಮುದ್ದಾಪುರಮ್ಯಾಸರಹಟ್ಟಿ, ಯಳಗೋಡು, ಬಸ್ತಿಹಳ್ಳಿ, ನೆಲ್ಲಿಕಟ್ಟೆ, ಹೊಸಹಟ್ಟಿ, ಇಸಾಮುದ್ರ, ಕಾಲಗೆರೆ ಕೋಡಿಹಳ್ಳಿ, ಕೊಗುಂಡೆ, ಬಹದ್ದೂರ್‌ಗಟ್ಟ, ಯಮ್ಮನಘಟ್ಟ, ಪಂಜಯ್ಯನಹಟ್ಟಿ, ನಂದಿಹಳ್ಳಿ, ದ್ಯಾಪನಹಳ್ಳಿ, ಚೌಲಿಹಳ್ಳಿ, ಚೌಲಿಹಳ್ಳಿ ಗೊಲ್ಲರಹಟ್ಟಿ, ಕೋಡಿರಂಗವನಹಳ್ಳಿ, ವಡ್ಡರಹಟ್ಟಿ, ಹೆಗಡೆಹಾಳು, ಕಸವನಹಳ್ಳಿ ಬಿ.ಗೊಲ್ಲರಹಟ್ಟಿ, ಭರಮಸಾಗರ ಭರಮಣ್ಣನಾಯಕ ತೆಪ್ಪೋತ್ಸವದ ನಂತರ ಬಿಚ್ಚುಗತ್ತಿ ಭರಮನಾಯಕ ಮಹಾಮಂಟಪಕ್ಕೆ ಆಗಮಿಸಲಿದ್ದಾರೆ.

**ವಾಹನ ನಿಲುಗಡೆ ಮತ್ತು ಸಂಚಾರ ನಿರ್ವಾಹಣೆ ವ್ಯವಸ್ಥೆ:** ತರಳಬಾಳು ಹುಣ್ಣಿಮೆ ಮಹೋತ್ಸವಕ್ಕೆ ಆಗಮಿಸುವ ವಾಹನ ಸವಾರರಿಗೆ ಕಾರ್ಯಕ್ರಮ ಸ್ಥಳದ ಎರಡೂ ಭಾಗದಲ್ಲೂ ಹುಣ್ಣಿಮೆ ಸಮಿತಿಯು ಸೂಚನಾ ಫಲಕಗಳ ವ್ಯವಸ್ಥೆಯೊಂದಿಗೆ ಸುಸಜ್ಜಿತ ವಾಹನ ನಿಲುಗಡೆ ವ್ಯವಸ್ಥೆಯನ್ನು ಹಾಗೂ ನಿಲುಗಡೆ ಸ್ಥಳದಲ್ಲಿ ಬೆಳಕಿನ ವ್ಯವಸ್ಥೆಯನ್ನೂ ಸಹ ಕಲ್ಪಿಸಲಾಗಿದೆ.

**ತರಳಬಾಳು ಹುಣ್ಣಿಮೆ – ಅಂಚೆ ಇಲಾಖೆಯಿಂದ ವಿಶೇಷ ಲಕೋಟೆ:** ತರಳಬಾಳು ಹುಣ್ಣಿಮೆಯ ನೆನಪಿಗಾಗಿ ಭಾರತೀಯ ಅಂಚೆ ಇಲಾಖೆಯು ವಿಶೇಷ ಅಂಚೆ ಲಕೋಟೆಯನ್ನು ದೇಶದ ಎಲ್ಲಾ ಅಂಚೆ ಕಚೇರಿಗಳಲ್ಲಿ ಬಿಡುಗಡೆ ಮಾಡಿದೆ. ಭರಮಣ್ಣನಾಯಕನ ಕೆರೆಯಲ್ಲಿ ನೀರು ಚಿಮ್ಮುವಕಾರಂಜಿಯಹಿನ್ನೆಲೆಯವಿನ್ಯಾಸದ ಮೇಲೆ ಲಿಂ.ಶಿವಕುಮಾರ ಸ್ವಾಮೀಜಿ ಹಾಗೂ ಶಿವಮೂರ್ತಿ ಸ್ವಾಮಿಜಿ ಅವರ ಚಿತ್ರಗಳನ್ನು ಮುದ್ರಿಸಲಾಗಿದೆ. ವಿಶ್ವಬಂಧು ಮರುಳಸಿದ್ದರು ತೆಲುಗುಬಾಳುಸಿದ್ದನಿಗೆ ಆಶೀರ್ವದಿಸುವ ಸುಂದರ ಚಿತ್ರವನ್ನು ಲಕೋಟೆಯ ಮೇಲೆ ಮುದ್ರಿಸಲಾಗಿದೆ. ಹುಣ್ಣಿಮೆಗೆ ಆಗಮಿಸುವ ಭಕ್ತಾದಿಗಳಿಗೆ ಭಾರತೀಯ ಅಂಚೆ ಇಲಾಖೆಯು ಸ್ಮರಣೀಯ ಕೊಡುಗೆ ನೀಡಿದೆ.

ಲಕೋಟೆಯಲ್ಲಿ 12ನೇ ಶತಮಾನದಲ್ಲಿ ಸ್ಥಾಪಿತಗೊಂಡ ಸಿರಿಗೆರೆಯ ಶ್ರೀ ತರಳಬಾಳು ಜಗದ್ಗುರು ಬೃಹನ್ಮಠ ಮಾನವೀಯತೆಯ ತಳಹದಿಯ ಮೇಲೆ ಸರ್ವ ಜನಾಂಗದ ಉನ್ನತಿಗಾಗಿ ಸ್ವಾತಂತ್ರ್ಯ ಪೂರ್ವದಿಂದಲೂ ಸೇವೆ ಸಲ್ಲಿಸುತ್ತಾ ಬಂದಿರುವ ದಕ್ಷಿಣ ಭಾರತದ ಒಂದು ಪ್ರಮುಖ ಮಠವಾಗಿದೆ. ಇದರ ಮೂಲ ಸಂಸ್ಥಾಪಕರಾದ ವಿಶ್ವಬಂಧು ಮರುಳಸಿದ್ದರು ಬಸವಣ್ಣನವರ ಹಿರಿಯ ಸಮಕಾಲೀನವರು. ಮಾಘ ಶುದ್ಧ ಹುಣ್ಣಿಮೆಯಂದು ತಮ್ಮ ಶಿಷ್ಯ ತೆಲುಗುಬಾಳುಸಿದ್ದನಿಗೆ 'ತರಳ ಬಾಳು' ಎಂದು ಹರಸಿದರು. ಈ ನೆಲೆಯಲ್ಲಿ ನಾಡಿನಾದ್ಯಂತಪ್ರತಿವರ್ಷಆಚರಿಸಿಕೊಂಡು ಬಂದಿರುವ ತರಳಬಾಳು ಹುಣ್ಣಿಮೆ ಮಹೋತ್ಸವ ಸಾಮಾಜಿಕ ಸಮಾನತೆ, ಶಾಂತಿ, ಸಹೋದರತ್ವ, ಭಾವೈಕ್ಯತೆ ಮತ್ತು ಜಾತ್ಯಾತೀತ ಭಾವನೆಯನ್ನು ಬೆಳೆಸುತ್ತಾ ಬಂದಿರುವ ಸರ್ವ ಜನಾದಾರಣೀಯ ನಾಡ ಹಬ್ಬವಾಗಿದೆ ಎಂದು ಉಲ್ಲೇಖಿಸಲಾಗಿದೆ.

# ತರಳಬಾಳು ಹುಣ್ಣಿಮೆ–ಸಾಂಸ್ಕೃತಿಕ ಸ್ಪರ್ಧೆಗಳ ಊರಣ, ಸಾಂಸ್ಕೃತಿಕ ಕ್ರೀಡಾಸ್ಪರ್ಧೆಗಳಿಗೆ ಆಹ್ವಾನ

» **ಚಿತ್ರದುರ್ಗ**

ಶ್ರೀ ತರಳಬಾಳು ಜಗದ್ಗುರು ಬೃಹನ್ಮಠದ ವಾರ್ಷಿಕ ಸಮಾರಂಭವಾದ ತರಳಬಾಳು ಹುಣ್ಣಿಮೆ ಮಹೋತ್ಸವು ಫೆ.4ರಿಂದ 12 ರವರೆಗೆ ಚಿತ್ರದುರ್ಗ ಜಿಲ್ಲೆಯ ಭರಮಸಾಗರದಲ್ಲಿ ಜರುಗಲಿದ್ದು, ಈ ಕಾರ್ಯಕ್ರಮದಲ್ಲಿ ವಿಶಿಷ್ಟ ಸಾಂಪ್ರದಾಯಿಕ ಪ್ರತಿಭೆಗಳಿಗೆ ಅವಕಾಶ ನೀಡುವ ನಿಟ್ಟಿನಲ್ಲಿ ಶ್ರೀಮಠವು ಅನೇಕ ಕ್ರೀಡಾ ಸ್ಪರ್ಧೆಗಳನ್ನು ಏರ್ಪಡಿಸಿದೆ.

ಫೆ.5ರ ಬುಧವಾರ ಬೆಳಗ್ಗೆ 10 ಗಂಟೆಯಿಂದ ಸಂಜೆ 4ರ ವರೆಗೆ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಖೋ–ಖೋ, ವಾಲಿಬಾಲ್, ಕಬ್ಬಡಿ, ಷಟಲ್‌ಬ್ಯಾಡ್ಮಿಟನ್, ಅಥ್ಲೆಟಿಕ್ಸ್, ಯೋಗಾಸನಸ್ಪರ್ಧೆ, ಕ್ರೀಡಾ ಅಂಕಣಗಳ



ಮಾದರಿ ವಸ್ತು ಪ್ರದರ್ಶನಗಳು ಜರುಗಲಿವೆ.

ಪುರುಷರ ಮುಕ್ತ ಪಂದ್ಯಾವಳಿಗಳಾಗಿ ಫೆ.6ರ ಗುರುವಾರ ಕಬಡ್ಡಿ, ಫೆ.7ರಂದು ಶುಕ್ರವಾರ ವಾಲಿಬಾಲ್ ಸ್ಪರ್ಧೆಗಳು ನಡೆಯಲಿದ್ದು, ಎರಡು ಸ್ಪರ್ಧೆಗಳಿಗೆ ತಲಾ ಪ್ರಥಮ 30,000, ದ್ವಿತೀಯ 20000, ತೃತೀಯ 10000 ರೂಗಳ ಬಹುಮಾನ ಜೊತೆಗೆ ತರಳಬಾಳು ಕಪ್ ನೀಡಲಾಗುವುದು.

ಫೆ.8ರಂದು ಶನಿವಾರ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಖೋ–ಖೋ, ವಾಲಿಬಾಲ್, ಯೋಗಾಸನ ಸ್ಪರ್ಧೆ, ಷಟಲ್‌ಬ್ಯಾಡ್ಮಿಟನ್, ಅಥ್ಲೆಟಿಕ್ಸ್, ಫೆ.9ರ ಭಾನುವಾರ ಕಾಲೇಜು ವಿದ್ಯಾರ್ಥಿಗಳಿಗೆ ಖೋ–ಖೋ, ವಾಲಿಬಾಲ್, ಕಬಡ್ಡಿ, ಯೋಗಾಸನ ಸ್ಪರ್ಧೆ, ಷಟಲ್‌ಬ್ಯಾಡ್ಮಿಟನ್, ಪುರುಷ ನೌಕರ ವಿಭಾಗದಲ್ಲಿ ವಾಲಿಬಾಲ್, ಷಟಲ್‌ಬ್ಯಾಡ್ಮಿಟನ್, ಮಹಿಳಾ ನೌಕರರ ವಿಭಾಗದಲ್ಲಿ ಥ್ರೋಬಾಲ್, ಟೆನಿಕಾಯ್ಟ್ ಸ್ಪರ್ಧೆಗಳನ್ನು ಆಯೋಜಿಸಿದ್ದು, ಫೆ.10 ಸೋಮವಾರ ಮಹಿಳಾ ಮತ್ತು ಪುರುಷರ ಗ್ರಾಮೀಣ ಕ್ರೀಡೆಗಳಾದ ಹಗ್ಗಜಗ್ಗಾಟ, ಚಮಚ ಮತ್ತು ನಿಂಬೆಹಣ್ಣು ಓಟ, ಗೋಣಿಚೀಲದ ಓಟ, ಮ್ಯೂಸಿಕಲ್ ಚೇರ್, ಮಡಿಕೆ ಹೊಡೆಯುವ ಆಟದ ಸ್ಪರ್ಧೆಗಳನ್ನು ಆಯೋಜಿಸಿದೆ.

**ಕುಸ್ತಿ ಸ್ಪರ್ಧೆಗಳು:** ಫೆ.11ರ ಮಂಗಳವಾರ ರಾಜ್ಯಮಟ್ಟದ ಪುರುಷರ ಮುಕ್ತ ಕುಸ್ತಿ ಪಂದ್ಯಾವಳಿಗಳು ಜರುಗಲಿದ್ದು, ಪ್ರಥಮ 15000 ಜೊತೆ ಬೆಳ್ಳಿಗದೆ, ದ್ವಿತೀಯ 12500, ತೃತೀಯ 10000, ಚತುರ್ಥ 7500 ರೂಗಳ ನಗದು ಬಹುಮಾನ, ಪಾರಿತೋಷಕ ಮತ್ತು ಪ್ರಶಸ್ತಿಪತ್ರದ ಜೊತೆಗೆ ಶ್ರೀ ತರಳಬಾಳು ಕಂಠೀರವ ಪ್ರಶಸ್ತಿ ನೀಡಲಾಗುತ್ತದೆ. ಉಚಿತ ಪ್ರವೇಶವಿದ್ದು, ಪುರುಷರ ದೇಹ ತೂಕ 65 ರಿಂದ 74 ಕೆಜಿ ನಿಗಮಾಡಲಾಗಿದೆ.

ತರಳಬಾಳು ಕೇಸರಿ ಪ್ರಶಸ್ತಿಗೆ ಪ್ರಥಮ 12500, ದ್ವಿತೀಯ 9500, ತೃತೀಯ 7500, ಚತುರ್ಥ 6000 ನಗದು ಬಹುಮಾನ, ಪಾರಿತೋಷಕ ಮತ್ತು ಪ್ರಶಸ್ತಿಪತ್ರ ನೀಡಲಿದ್ದು, ಪುರುಷರ ದೇಹ ತೂಕ 61 ರಿಂದ 65 ಕೆಜಿಗೆ ನಿಗಮಾಡಲಾಗಿದೆ.

ಶ್ರೀ ತರಳಬಾಳು ಕುಮಾರ ಪ್ರಶಸ್ತಿಗೆ ಪ್ರಥಮ 9000, ದ್ವಿತೀಯ 7,000, ತೃತೀಯ 6,000 ಚತುರ್ಥ 5000 ನಗದು ಬಹುಮಾನ, ಪಾರಿತೋಷಕ ಮತ್ತು ಪ್ರಶಸ್ತಿಪತ್ರ ನೀಡಲಿದ್ದು, ಪುರುಷರ ದೇಹ ತೂಕ 57 ರಿಂದ 61 ಕೆಜಿ ನಿಗದಿ ಮಾಡಲಾಗಿದೆ. ಎಲ್ಲಾ ಸ್ಪರ್ಧಾರ್ಥಿಗಳಿಗೂ ಉಚಿತ ಪ್ರವೇಶವಿರಲಿದ್ದು, ಪ್ರಯಾಣ ಭತ್ಯೆ ನೀಡಲಾಗುವುದಿಲ್ಲ.

ಪುಟ 2

## ಫಾಸ್ಟ್ ನ್ಯೂಸ್

### "ಮಾಳಿಗೆ ಹನುಮಂತಪ್ಪ ನಿಧನ "

» **ಹೊಸದುರ್ಗ**

ತಾಲೂಕಿನ ಕಸಬಾ ಹೋಬಳಿ ಹೇರೂರು ಗ್ರಾಮದ ಮಾಳಿಗೆ ಹನುಮಂತಪ್ಪ(75) ಇವರು ತೀವ್ರ ಅನಾರೋಗ್ಯದಿಂದ ಮಣಿಪಾಲ ಆಸ್ಪತ್ರೆಯಲ್ಲಿ ನಿಧನ ಹೊಂದಿದ್ದು ಮೃತರಿಗೆ ಚಿತ್ರದುರ್ಗ ಸರ್ಕಾರಿ ಪದವಿ ಪೂರ್ವ ಕಾಲೇಜು ಉಪನ್ಯಾಸ ಪ್ರೊ, ರಂಗಸ್ವಾಮಿ ಮತ್ತು ಶಿವಕುಮಾರ್ ಸೇರಿದಂತೆ ಪತ್ನಿ, ಇಬ್ಬರು ಪುತ್ರರು ಮೂವರು ಪುತ್ರಿಯರನ್ನು ಅಗಲಿದ್ದಾರೆ ಮೃತರ ಅಂತ್ಯಕ್ರಿಯೆ ಸ್ವಗ್ರಾಮ ಹೇರೂರಿನ ತಮ್ಮ ಜಮೀನಿನಲ್ಲಿ ಇಂದು ಮಧ್ಯಾಹ್ನ 12 ಗಂಟೆಗೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

### ಆಶು ಭಾಷಣ ಸ್ಪರ್ಧೆಯಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಗುರುಕುಮಾರ್



» **ಹೊಸದುರ್ಗ**

ಚಿತ್ರದುರ್ಗದಲ್ಲಿ ನಡೆದ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ 2024-25 ನೇ ಸಾಲಿನ ಜಿಲ್ಲಾ ಮಟ್ಟದ ಅಶುಭಾಷಣ ಸ್ಪರ್ಧೆಯಲ್ಲಿ ಪ್ರಾಥಮಿಕ ವಿಭಾಗದಲ್ಲಿ ಪಟ್ಟಣದ ರಾಮನ್ ಪ್ರಾಥಮಿಕ ಶಾಲೆಯ 7 ನೇ ತರಗತಿಯ ವಿದ್ಯಾರ್ಥಿ ಗುರುಕುಮರ್ ಹೆಚ್ ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಗಳಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ, ಗುರುಕುಮರ್ ಪಟ್ಟಣದ ಕುಮಾರ್ ಸ್ಟುಡಿಯೋ ಮಾಲಿಕ ಕುಮಾರ್ ಅವರ ಪುತ್ರ, ಈ ವಿದ್ಯಾರ್ಥಿಗೆ ಶಾಲಾ ಆಡಳಿತ ಮಂಡಳಿ, ಸಿಬ್ಬಂದಿ ವರ್ಗ, ಪೋಷಕರು ಹಾಗೂ ಸ್ನೇಹಿತರು ಶುಭ ಕೋರಿದ್ದಾರೆ.

### ಫೆ.5 ರಿಂದ ಮಾವು ಹಾಗೂ ಬಾಳೆ ಬೆಳೆಗಳಲ್ಲಿ ನೀರಾವರಿ ತಾಂತ್ರಿಕತೆಗಳ ಅಳವಡಿಕೆ, ನಿರ್ವಹಣೆ ಕುರಿತು ತರಬೇತಿ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಫೆ.05 ರಿಂದ 07 ರವರೆಗೆ ಜಿಲ್ಲೆಯ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಕ್ರಮವಾಗಿ ದಾಳಿಂಬೆ, ಮಾವು ಹಾಗೂ ಬಾಳೆ ಬೆಳೆಗಳಲ್ಲಿ ಸೂಕ್ಷ್ಮ ನೀರಾವರಿ ತಾಂತ್ರಿಕತೆಗಳ ಅಳವಡಿಕೆ ಮತ್ತು ನಿರ್ವಹಣೆ ಕುರಿತು ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಫೆ.05ರಂದು ಬೆಳಿಗ್ಗೆ 10ಕ್ಕೆ ಬಬ್ಬೂರಿನ ತೋಟಗಾರಿಕೆ ಕಾಲೇಜಿನ ಸಹಾಯಕ ಪ್ರಾಧ್ಯಪಕರಾದ ಡಾ. ಶ್ರೀಧರ್ ಅವರು ದಾಳಿಂಬೆ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮಗಳ ಕುರಿತು, ರೋಗಶಾಸ್ತ್ರಜ್ಞರಾದ ಡಾ, ಗುರುದೇವಿ ಅವರು ಈ ಬೆಳೆಯಲ್ಲಿ ಬರುವ ರೋಗಗಳ ನಿರ್ವಹಣೆ ಹಾಗೂ ಕೀಟಶಾಸ್ತ್ರಜ್ಞರಾದ ಡಾ.ತಾರಣಿ ಅವರು ದಾಳಿಂಬೆ ಬೆಳೆಯಲ್ಲಿ ಕೀಟಗಳ ನಿರ್ವಹಣೆ ಕುರಿತು ವಿಷಯ ಮಂಡನೆ ಮಾಡುವರು. ಫೆ.06 ರಂದು ಬೆಳಿಗ್ಗೆ 10ಕ್ಕೆ ಬಬ್ಬೂರಿನ ತೋಟಗಾರಿಕೆ ಕಾಲೇಜಿನ ಸಹಾಯಕ ಪ್ರಾಧ್ಯಪಕರಾದ ಡಾ. ಶ್ರೀಧರ್ ರವರು ಮಾವು ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮಗಳ ಕುರಿತು ಹಾಗೂ ಈ ಬೆಳೆಯಲ್ಲಿ ಬರುವ ರೋಗ ಮತ್ತು ಕೀಟಗಳ ನಿರ್ವಹಣೆ ಕುರಿತು ಬಬ್ಬೂರು ಫಾರಂನ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ತಾಂತ್ರಿಕ ಅಧಿಕಾರಿಯಾದ ಡಾ.ಟಿ.ರುದ್ರಮುನಿ ವಿಷಯ ಮಂಡನೆ ಮಾಡುವರು. ಫೆ.07ರಂದು ಬೆಳಿಗ್ಗೆ 10ಕ್ಕೆ ಬಬ್ಬೂರು ಫಾರಂನ ಕೃಷಿ ವಿಜ್ಞಾನ ಕೇಂದ್ರದ ತೋಟಗಾರಿಕೆ ತಜ್ಞರಾದ ಡಾ.ಪಿ.ಎಸ್. ಮಹಾಂತೇಶ್ ಅವರು ಬಾಳೆ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮಗಳ ಕುರಿತು ಹಾಗೂ ಈ ಬೆಳೆಯಲ್ಲಿ ಬರುವರೋಗ ಮತ್ತು ಕೀಟಗಳ ನಿರ್ವಹಣೆ ಕುರಿತು ಬಬ್ಬೂರಿನ ತೋಟಗಾರಿಕೆ ಕಾಲೇಜಿನ ಹಿರಿಯ ಕ್ಷೇತ್ರ ಸಹಾಯಕರಾದ ಡಾ.ಜಿ.ಹನುಮಂತನಾಯಕ್ ವಿಷಯ ಮಂಡನೆ ಮಾಡುವರು. ಮೂರು ದಿನಗಳಲ್ಲಿ ಸಹ ಬೆಂಗಳೂರಿನ ಜೈನ್ ಇರಿಗೇಷನ್ ಕಂಪನಿಯ ಕೆ.ದೇವರಾಜ್ ಅವರು ನೀರಿನ ಸಮರ್ಥ ಬಳಕೆ, ದಾಳಿಂಬೆ, ಮಾವು ಹಾಗೂ ಬಾಳೆ ಬೆಳೆಗಳಲ್ಲಿ ಸೂಕ್ಷ್ಮ ನೀರಾವರಿ ಘಟಕಗಳ ಅಳವಡಿಕೆ ಮತ್ತು ಅವುಗಳ ನಿರ್ವಹಣೆಯ ಕುರಿತು ವಿಷಯ ಮಂಡನೆ ಮಾಡುವರು. ಪ್ರತಿ ದಿನ ಆಸಕ್ತ ಚಿತ್ರದುರ್ಗ ಜಿಲ್ಲೆಯ 60 ಜನ ರೈತಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು 8277931058 ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕರಾದ ಆರ್.ರಜನೀಕಾಂತ ತಿಳಿಸಿದ್ದಾರೆ. ನೋಂದಾವಣಿ ಮಾಡಿಕೊಂಡ ರೈತಭಾಂದವರು ಫ್ರೂಟ್ಸ್ ಐಡಿ (ಎಫ್.ಐಡಿ) ಅಥವಾ ಚುನಾವಣೆ ಗುರುತಿನ ಚೀಟಿಯೊಂದಿಗೆ ತರಬೇತಿಗೆ ಹಾಜರಾಗಲು ವಿನಂತಿಸಿದೆ ಹಾಗೂ ಮೊದಲು ನೋಂದಾವಣಿ ಮಾಡಿಕೊಂಡ 60 ಜನ ರೈತಭಾಂದವರನ್ನು ತರಬೇತಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗುವುದು.

# ಮನೆಗಳ ಹಂಚಿಕೆಯಲ್ಲಿ ನಿಯಮ ಉಲ್ಲಂಘಿಸಿರುವ ಶಾಸಕ ಡಾ.ಚಂದ್ರಪ್ಪ ವಿರುದ್ಧ ಆಂಜನೇಯ ಆಕ್ರೋಶ

» **ಚಿತ್ರದುರ್ಗ**

ಬಡವರಿಗೆ ಮನೆಗಳ ಹಂಚಿಕೆಯಲ್ಲಿ ನಿಯಮ ಪಾಲಿಸದೆ ಹಿಂಬಾಲಕರುಗಳಿಂದ ಪಟ್ಟಿ ತರಿಸಿಕೊಂಡು ಮನ ಬಂದಂತೆ ಮನೆಗಳನ್ನು ಹಂಚಲಾಗಿದೆ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷ ಹಾಗೂ ಮಾಜಿ ಸಚಿವ ಹೆಚ್. ಆಂಜನೇಯ ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ ವಿರುದ್ದ ಹರಿಹಾಯ್ದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಹೊಳಲ್ಕೆರೆ ತಾಲ್ಲೂಕಿನ ತಾಳ್ಯ, ತೇಕಲವಟ್ಟಿ, ಹೆಚ್.ಡಿ.ಪುರ, ಹಿರೇಎಮ್ಮಿಗನೂರು ಅರೆಹಳ್ಳಿ, ಶಿವಗಂಗ, ಗುಂಡೇರಿ, ಚಿಕ್ಕಜಾಜೂರು, ಆಡನೂರು, ಗುಂಜಿಗನೂರು, ಅಂದನೂರು, ರಾಮಗಿರಿ, ಎನ್.ಜಿ.ಹಳ್ಳಿ, ಶಿವಪುರ, ಮುತ್ತುಗದೂರು, ಚಿತ್ರಹಳ್ಳಿ, ಬಿ.ದುರ್ಗ ಗ್ರಾಮಗಳಲ್ಲಿನ ಬಡವರು, ಸೂರಿಲ್ಲದ ನಿರ್ಗತಿಕರನ್ನು ಗುರುತಿಸಿ ಮನೆಗಳನ್ನು ಹಂಚಿಕೆ ಮಾಡುವ ಬದಲು ಹಿಂಬಾಲಕರುಗಳಿಂದ ಪಟ್ಟಿ ತರಿಸಿಕೊಂಡಿರುವುದನ್ನು ಜಿಲ್ಲಾಧಿಕಾರಿಗಳು




ಅನಮೋದಿಸಬಾರದೆಂದು ಹೆಚ್. ಆಂಜನೇಯ ಒತ್ತಾಯಿಸಿದರು.

ಭೋವಿ ಜನಾಂಗಕ್ಕೆ ಮುನ್ನೂರು ಮನೆ, ಲಿಂಗಾಯಿತರಿಗೆ 20. ಸುಡುಗಾಡು ಸಿದ್ದರಿಗೆ 16, ನಾಯಕ ಜನಾಂಗಕ್ಕೆ 8, ಮಾದಿಗ ಸಮುದಾಯಕ್ಕೆ ಆರು, ಗೊಲ್ಲರಿಗೆ ಐದು

ದೇವಾಂಗರಿಗೆ 4, ಛಲವಾದಿಗಳಿಗೆ 2, ಕೊರಚ ಜನಾಂಗದವರಿಗೆ 1, ದರ್ಜಿಗೆ 1, ಕಮ್ಮಾರ ಜನಾಂಗಕ್ಕೆ ಒಂದು ಮನೆ ವಿತರಿಸಿರುವುದು ಯಾವ ನ್ಯಾಯ ಎಂದು ಪ್ರಶ್ನಿಸಿದ ಹೆಚ್. ಆಂಜನೇಯ ರಸ್ತೆ ಮೇಲೆಯೇ ರಸ್ತೆಗಳನ್ನು ನಿರ್ಮಿಸುತ್ತಿರುವುದು ಸಾಕಾಗದೆ ಗಣಿ ಹಣ ಲೂಟಿ ಮಾಡಿ ಶಾಸಕ ಡಾ.ಎಂ.ಚಂದ್ರಪ್ಪ ಕೋಟ್ಯಾಧಿಪತಿಯಾಗುತ್ತಿದ್ದಾರೆ.

ಮನೆಗಳ ಹಂಚಿಕೆ ಮುನ್ನಾ ಗ್ರಾಮ ಸಭೆಗಳನ್ನು ನಡೆಸಬೇಕಿತ್ತು. 335 ಮನೆಗಳ ಗುರಿಯಿದ್ದು, 366 ಮನೆಗಳ ಪಟ್ಟಿ ಮಾಡಿ ಅನುಮೋದನೆಗೆ ಜಿಲ್ಲಾಧಿಕಾರಿಗೆ ಕಳಿಸಲಾಗಿದೆ. ಕಾನೂನು ಮೀರಿ ಮನೆಗಳನ್ನು ಹಂಚಿಕೆ ಮಾಡಿರುವುದಕ್ಕೆ ಸಂಬಂಧಪಟ್ಟಂತೆ ಹದಿನೇಳು ಗ್ರಾಮ ಪಂಚಾಯಿತಿಗಳ ಪಿ.ಡಿ.ಓ.ಗಳನ್ನು ಸೇವೆಯಿಂದ ಅಮಾನತ್ತುಗೊಳಿಸಬೇಕು. ಸಾಮಾಜಿಕ ನ್ಯಾಯ ಮತ್ತು ಸಮಾನತೆಯನ್ನು ಎತ್ತಿಹಿಡಿಯುವಲ್ಲಿ ಅಧಿಕಾರಿಗಳು ನಿರ್ಲಕ್ಷ್ಯೆ ವಹಿಸಿರುವುದು ಎದ್ದು ಕಾಣುತ್ತಿದೆ. ಜಿಲ್ಲಾಧಿಕಾರಿಗಳು ಮನೆಗಳ ಹಂಚಿಯಾಗಿರುವುದನ್ನು ಪರಿಶೀಲಿಸಬೇಕೆಂದು ಹೆಚ್.ಆಂಜನೇಯ ಮನವಿ ಸಲ್ಲಿಸಿದರು.ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್‌ಕುಮಾರ್, ಡಿ.ಎನ್.ಮೈಲಾರಪ್ಪ, ಗ್ಯಾರೆಂಟಿ ಅನುಷ್ಠಾನಗಳ ಸಮಿತಿ ಅಧ್ಯಕ್ಷ ಆರ್.ಶಿವಣ್ಣ, ಮುದಸಿರ್ ನವಾಜ್, ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ, ಲಿಡ್ಕರ್ ಮಾಜಿ ಚೇರ್ಮನ್ ಓ.ಶಂಕರ್, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್, ನ್ಯಾಯವಾದಿ ರವೀಂದ್ರ ಇನ್ನು ಅನೇಕರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಸಭೆಗೆ ಸಂಪೂರ್ಣ ಮಾಹಿತಿಯೊಂದಿಗೆ ಬನ್ನಿ: ಶಾಸಕ ರಘುಮೂರ್ತಿ ಅಧಿಕಾರಿಗಳಿಗೆ ಸೂಚನೆ

» **ಚಳ್ಳಕೆರೆ**

ಪ್ರತಿ ಮೂರು ತಿಂಗಳಿಗೊಮ್ಮೆ ನಡೆಯುವ ತ್ರೈಮಾಸಿಕ ಪರಿಶೀಲನಾ ಸಭೆಗೆ ಆಗಮಿಸುವ ತಾಲ್ಲೂಕು ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆಗೆ ಸಂಬಂಧಪಟ್ಟ ಸಂಪೂರ್ಣ ಮಾಹಿತಿ ದಾಖಲೆಗಳನ್ನು ಒದಗಿಸಿಬೇಕು. ಪದೇ ಪದೆ ನಿರ್ಲಕ್ಷ್ಯ ಸಲ್ಲದು ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಅಧಿಕಾರಿಗಳ ವರ್ಗದ ಮೇಲೆ ಬೇಸರಗೊಂಡರು.

ಅವರು, ಸೋಮವಾರ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ತ್ರೈಮಾಸಿಕ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾಹಿತಿ ಪಡೆದರು. ಕುಡಿಯುವ ನೀರು ಇಲಾಖೆ ಅಧಿಕಾರಿ ದಯಾನಂದ ಮಾಹಿತಿ ನೀಡಿ, 281 ಶುದ್ದ ಕುಡಿಯುವ ನೀರಿನ ಘಟಕಗಳು ರಿಪೇರಿಯಲ್ಲಿದ್ದು ಅವುಗಳಲ್ಲಿ ಈಗಾಗಲೇ 51ನ್ನು ರಿಪೇರಿ ಮಾಡಲಾಗಿದ್ದು, 230 ಘಟಕಗಳು ರಿಪೇರಿಯಾಗಬೇಕಿದೆ ಎಂದರು. ಕೆಎಸ್‌ಆರ್‌ಟಿಸಿ ಡಿಪೋ ವ್ಯವಸ್ಥಾಪಕ ಮಾಹಿತಿ ನೀಡಿ, ಈಗಾಗಲೇ ನಗರದ ಹೊರವಲಯದ ಹಾಸ್ಟಲ್ ಬಳಿ ವಿದ್ಯಾರ್ಥಿಗಳನ್ನು ಶಾಲಾ, ಕಾಲೇಜಿಗೆ ಕರೆತರಲು ಬಸ್ ವ್ಯವಸ್ಥೆ ಮಾಡಿದೆ, ನನ್ನಿವಾಳ ವ್ಯಾಪ್ತಿಯ ಹಟ್ಟಿಗಳಿಗೆ ಶೀಘ್ರದಲ್ಲೇ ಸಾರಿಗೆ ಬಸ್‌ಗಳನ್ನು ಸೇವೆಗೆ ಅರ್ಪಿಸಲಾಗುವುದು ಎಂದರು.



ಪಶುವೈದ್ಯಾಧಿಕಾರಿ ರೇವಣ್ಣ ಮಾಹಿತಿ ನೀಡಿ, ಜೂನ್ 2024ಕ್ಕೆ ತಾಲ್ಲೂಕಿನಾದ್ಯಂತ ಒಟ್ಟು 758 ಕುರಿ, ಮೇಕೆ, 348 ಜಾನುವಾರುಗಳ ಪರಿಹಾರ ದನವನ್ನು ಸರ್ಕಾರ ನೀಡಿದೆ. ಉಳಿದ ಪರಿಹಾರದ ಹಣ ಶೀಘ್ರದಲ್ಲೇ ಫಲಾನುಭವಿಗಳಿಗೆ ತಲುಪಿಸಲಾಗುವುದು ಎಂದರು. ಪಡಿತರ ಚೀಟಿ ವಿತರಣೆಗೆ ಸಂಬಂಧಿಸಿದಂತೆ ಅನಗತ್ಯವಾಗಿ ಯಾವುದೇ ರೇಷನ್ ಕಾರ್ಡ್‌ಗಳನ್ನು ರದ್ದುಪಡಿಸದಂತೆ ಸೂಚನೆ ನೀಡಿದರು. ಗ್ರಾಮೀಣ ಭಾಗದಲ್ಲಿರುವ ಶುದ್ದು ಕುಡಿಯುವ ನೀರಿನ ಘಟಕಗಳನ್ನು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಕೂಡಲೇ ಹಸ್ತಾಂತರ ಮಾಡುವಂತೆ ಅಧಿಕಾರಿಗಳಿಗೆಸೂಚಿಸಿದರು.ಕೃಷಿ,ತೋಟಗಾರಿಕೆ, ಕಾರ್ಮಿಕ, ಅಬಕಾರಿ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ಕಂದಾಯ, ಗ್ರಾಮೀಣಾಭಿವೃದ್ದಿ ಇಲಾಖೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಸಭೆಯಲ್ಲಿ ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ, ಜಂಟಿಕೃಷಿ ನಿರ್ದೇಶಕ ಟಿ.ಮಂಜುನಾಥ, ತಹಶೀಲ್ದಾರ್ ರೇಹಾನ್‌ಪಾಷ, ಚಿತ್ರದುರ್ಗ ತಹಶೀಲ್ದಾರ್ ನಾಗವೇಣಿ, ಚಿತ್ರದುರ್ಗ ಇಒ ರವಿಕುಮಾರ್, ಶಶಿಧರ ವೇದಿಕೆಯಲ್ಲಿ ಉಪಸ್ಥಿತರಿದ್ದರು.

# ಒಳಮೀಸಲಾತಿ ಕೂಡಲೆ ಜಾರಿಗೆ ಷಡಕ್ಷರ ಮುನಿ ಸ್ವಾಮಿಜಿ ಒತ್ತಾಯ



» **ಹೊಸದುರ್ಗ**

ದಲಿತರಲ್ಲಿ ಅತ್ಯಂತ ಶೋಷಿತರು ಮಾದಿಗ ಸಮೂದಾಯ ಸದಾಶಿವ ಆಯೋಗ ಅನ್ವಯ ಸುಪ್ರೀಂಕೋರ್ಟಿನ ಐತಿಹಾಸಿಕ ತೀಪು9 ಆದೇಶ ದಂತೆ ಸಕಾ9ರ ತಡಮಾಡದೆ ಶೀಘ್ರ ವಾಗಿ ಜಾರಿಗೆ ತರುವ ಮೂಲಕ ಮಾದಿಗ ಸಮೂದಾಯ ದ ಮೂರು ದಶಕಗಳ ಹೋರಾಟ ಕ್ಕೆ ನ್ಯಾಯ ಒದಗಿಸಬೇಕು. ಆ ಮೂಲಕ ಸಮಾಜ ಆಥಿ9ಕ, ಸಾಮಾಜಿಕ, ಶೈಕ್ಷಣಿಕ ,ರಾಜಕೀಯ ವಾಗಿ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಹಿರಿಯೂರು ತಾ.ಕೋಡಿಹಳ್ಳಿ ಆದಿ ಜಾಂಬವ ಬೃಹನ್ಮಠದ ಶ್ರೀ ಷಡಕ್ಷರ ಮುನಿ ದೇಶಿಕೇಂದ್ರ ಸ್ವಾಮಿಜಿ ತಿಳಿಸಿದರು.

ತಾಲ್ಲೂಕಿನ ಶ್ರೀರಾಂಪುರ ಹೋಬಳಿ ಹರಿಯನಹಳ್ಳಿ ಗ್ರಾಮದ ನೂತನ ದೇವಾಲಯ ಲೋಕಾಪ9ಣೆ ಧಾಮಿ9ಕ ಕಾಯ9ಕ್ರಮ ವನ್ನು ಉದ್ಘಾಟನೆ ನೆರವೇರಿಸಿ ಮಾತನಾಡಿ. ಸಮಾಜದ ಬಂಧುಗಳು ಬರಿ ಧಾಮಿ9ಕ ಕಾಯ9ಕ್ರಮ ಗಳಿಗೆ ಒತ್ತು ಕೊಡದೆ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಆಶಯ ದಂತೆ ಶಿಕ್ಷಣ ಕ್ಕೆ ಹೆಚ್ಚು ಒತ್ತು ನೀಡಬೇಕೆಂದು ತಿಳಿಸಿದರು. ಶಾಸಕ ಹಾಗೂ ರಾಜ್ಯ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ ಬೆಳಿಗ್ಗೆ ದೇವಸ್ಥಾನ ದ ಕಳಶ ರೋಹಣ ಕಾರ್ಯಮದಲ್ಲಿ ಭಾಗವಹಿಸಿದ್ದರು . ಸಮಾಜದ ಹಿರಿಯ ಮುಖಂಡ ರಾದ ಶ್ರೀರಾಂಪುರ ದಾಸಪ್ಪ ಮಾತನಾಡಿ. ಸಮಾಜ ಹೆಚ್ಚು ಶಕ್ತಿ ಯು ತ ವಾಗಿ ಬೆಳೆಯಲು ಶಿಕ್ಷಣದ ಅಗತ್ಯ ಬಹಳವಾಗಿ ಬೇಕು. ಸಮಾಜದ ಪ್ರಯೊಬ್ಬರು ಶಿಕ್ಷಣ ನಂತರ ಆಗ ಬೇಕೆಂದು ತಿಳಿಸಿದರು. ಮಾದಿಗ ನೌಕರರ ಸಂಘದ ಅಧ್ಯಕ್ಷ ಆರ್.ಮೂತ9ಪ್ಪ ಮಾತ ನಾಡಿ. ಸಮಾಜ ಅಭಿವೃದ್ಧಿ ಹೊಂದಲು ಶಿಕ್ಷಣವಂತರ ಸಂಖ್ಯೆ ಹೆಚ್ಚಾಗ ಬೇಕು ಸಕಾ9ರ ಸೌಲಭ್ಯಗಳು ದೊರೆತಾಗ ಸಮಾಜ ಎಲ್ಲಾ ಕ್ಷೇತ್ರಗಳಲ್ಲಿ ಬೆಳೆಯಲು ಸಾಧ್ಯ ಎಂದರು.ಸಮಾಜದ ಮುಖಂಡರಾದ ಹೆಗ್ಗೆರೆ ಶಂಕರಪ್ಪ ಮಾತನಾಡಿ. ಬಾಬಾ ಸಾಹೇಬ್ ಅಂಬೇಡ್ಕರ್ ಆಶಯದಂತೆ ಪ್ರತಿ ಮನೆ ಮನೆ ಗೆ ಒಬ್ಬರು ವಿದ್ಯಾ ವಂತರಾಗಿ ಸಕಾ9ರಿ ನೌಕರಿ ಹಿಡಿಯ ಬೇಕು ಆದಷ್ಟು ಬೇಗ ಸಕಾ9ರ ಒಳ ಮೀಸಲಾತಿಗಾಗಿ ಜಾರಿಗೊಳಿಸಿ ಮಾದಿಗ ಸಮಾಜ ಕ್ಕೆ ಅನುಕೂಲ ಮಾಡಿ ಕೊಡಬೇಕೆಂದು ತಿಳಿಸಿದರು. ಕಾಯ9ಕ್ರಮ ದ ಅಧ್ಯಕ್ಷತೆ ಯನ್ನು ಗ್ರಾ.ಪಂ.ಸದಸ್ಯ ಲೋಕೇಶ್ ಅಧ್ಯಕ್ಷತೆ ವಹಿಸಿದ್ದರು.

ಸಮಾರಂಭ ದಲ್ಲಿ ಬಿ ಜೆ ಪಿ ಮುಖಂಡ ಜಗದೀಶ್ ರಾಮಯ್ಯ ಪಂಚಾಕ್ಷರಿ , ಸಮಾಜ ಮುಖಂಡರುಗಳಾದ ಆದ್ರಿಕಟ್ಟೆ ಕುಮಾರಪ್ಪ ,ಮಳಲಿ ಶೇಖರಪ್ಪ ಕಪ್ಪಗೆರೆ ನಾಗರಾಜ್, ಶಿಕ್ಷಕ ಮಲ್ಲೇಶ್ ,ಪೀಲಾಪುರ ಆರ್ ಕಂಠೇಶ್, ಗರಗ ಮಂಜುನಾಥ್, ಉಪನ್ಯಾಸಕ ಕಿರಣ್ ಕುಮಾರ್ ,ಪೋಲೀಸ್ ಇಲಾಖೆ ಯ ನಾಗಭೂಷಣ್, ತಾ.ಡಿ.ಎಸ್.ಎಸ್.ನ ಕನಾ9ಕುಮಾರ್ ,ದೊ.ರಾಮಚಂದ್ರಪ್ಪ, ಗುಡಿಗೌಡ್ರುಗಳಾದ ಚಂದ್ರಪ್ಪ ,ತಿಮ್ಮಪ್ಪ , ಕಲ್ಲೇಶ್ ,ಹನುಮಂತಪ್ಪಪ್ರವೀಣ್ ,ಡಿ.ಮಂಜಪ್ಪ ,ಲೋಕೇಶ್ ,ಚೌಡಪ್ಪ ,ಹರೀಶ್ , ಪ್ರದೀಪ್, ತಿಮ್ಮಪ್ಪ ಇನ್ನು ಮುಂತಾದವರು ಉಪಸ್ಥಿತರಿದ್ದರು.

# ನಮ್ಮ ಬ್ಯಾಂಕಿನಲ್ಲಿ 1170 ಕೋಟಿ ಡೆಪಾಜಿಟ್ ಇದೆ

» **ಹೊಸದುರ್ಗ**

ಬ್ಯಾಂಕುಗಳಿಗಾಲಿ ಅಥವಾ ಸಹಕಾರ ಸಂಘಗಳಿಗಾಗಲಿ ಗ್ರಾಹಕರುಗಳೇ ಜೀವನಾಡಿಯಾಗಿರುತ್ತಾರೆ,ಬ್ಯಾಂಕ್ ಪ್ರಗತಿ ಪತದತ್ತ ಸಾಗಬೇಕಾದರೆ ಗ್ರಾಹಕರು ಹಾಗೂ ಆಡಳಿತ ಮಂಡಳಿಯ ನಿಸ್ವಾರ್ಥ ಸೇವೆ, ಸಿಬ್ಬಂದಿ ವರ್ಗದವರ ಪರಿಶ್ರಮ ಅತ್ಯಗತ್ಯ ನಮ್ಮ ಬ್ಯಾಂಕಿನಲ್ಲಿ ಈಗಾಗಲೇ 1170 ಕೋಟಿ ರೂ ಹಣ ಡೆಪಾಸಿಟ್ ಇದ್ದು ಬ್ಯಾಂಕ್ ವರ್ಷದಿಂದ ವರ್ಷಕ್ಕೆ ಹೆಚ್ಚಿನ ಲಾಭ ಗಳಿಸುತ್ತಾ ಮುನ್ನುಗ್ಗುತ್ತಿದೆ ಇದಕ್ಕೆ ಪ್ರತಿಯೊಬ್ಬ ಗ್ರಾಹಕರ ಸಹಕಾರವೇ ಕಾರಣ ಎಂದು ಶ್ರೀ ಸೀತಾರಾಘವ ಸೌಹಾರ್ದ ಸಹಕಾರ ಬ್ಯಾಂಕ್ ಅಧ್ಯಕ್ಷ ಹಂಜಿಶಿವಸ್ವಾಮಿ ತಿಳಿಸಿದರು.

ಪಟ್ಟಣದ ಗಣೇಶ ಸದನದಲ್ಲಿ ಆಯೋಜಿಸಲಾಗಿದ್ದ ಬ್ಯಾಂಕಿನ ಅಭಿವೃದ್ಧಿಗೆ ಪೂರಕವಾದ ಸಲಹೆ ಸೂಚನೆಗಳನ್ನು ಪಡೆಯಲು ಹಾಗೂ ಗ್ರಾಹಕರುಗಳ ಕುಂದು




ಕೊರತೆಗಳ ಬಗ್ಗೆ ಚರ್ಚಿಸಲು ನಿಯಮಿತದಿಂದ ಆಯೋಜಿಸಿದ್ದ ಗ್ರಾಹಕರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಾಲ ಪಡೆದವರು ಕಡ್ಡಾಯವಾಗಿ ಮರುಪಾವತಿ ಮಾಡಬೇಕು, ಉತ್ತಮ ಗ್ರಾಹಕರಿಂದ ಬ್ಯಾಂಕ್ ಹಾಗೂ ಸಹಕಾರಿ ಸಂಘಗಳು ಅಭಿವೃದ್ಧಿಗೊಳ್ಳುವುದಕ್ಕೆ ಸಹಕಾರಿಯಾಗುತ್ತದೆ, ಆಡಳಿತ ಚುಕ್ಕಾಣಿ ಹಿಡಿದ ಅಧ್ಯಕ್ಷರೇ ಆಗಲಿ ಸಿಬ್ಬಂದಿಗಳಾಗಲಿ ವ್ಯವಹಾರವನ್ನು ಕಟ್ಟುನಿಟ್ಟಾಗಿ ನಿಭಾಯಿಸಿಕೊಂಡರೆ ಬ್ಯಾಂಕ್ ಹಾಗೂ ಸಹಕಾರಿ ಸಂಘಗಳನ್ನು ಉಳಿಸಲು ಸಾಧ್ಯ,ಬ್ಯಾಂಕ್ ಮತ್ತಷ್ಟು ಪ್ರಗತಿ ಪಥದತ್ತ ಸಾಗಬೇಕಾದರೆ ಗ್ರಾಹಕರ ಸಹಕಾರ ಅವಶ್ಯವಿದೆ ಎಂದರು

ಸಭೆಯಲ್ಲಿ ಬ್ಯಾಂಕಿನ ಉಪಾಧ್ಯಕ್ಷರಾದ ಡಿ.ಆದಿರಾಜಯ್ಯ ವ್ಯವಸ್ಥಾಪಕರಾದ ಎನ್. ಮಂಜುನಾಥ್, ನಿರ್ದೇಶಕರುಗಳಾದ ನಾಗೇಂದ್ರಪ್ಪ, ಇ.ಟಿ.ಬಾಹುಬಲಿ, ಡಿ.ಎಸ್.ಶ್ರೀನಿವಾಸಯ್ಯ, ಪಾರ್ವತಮ್ಮ ಸೇರಿದಂತೆ ಆಡಳಿತ ಮಂಡಳಿಯ ಸರ್ವ ಸದಸ್ಯರುಗಳು, ಬ್ಯಾಂಕಿನ ಸಿಬ್ಬಂದಿ ವರ್ಗ ಹಾಗೂ ಗ್ರಾಹಕರುಗಳು ಉಪಸ್ಥಿತರಿದ್ದರು

## ಪ್ರಮುಖ ಸುದ್ದಿ

# ತರಳಬಾಳು ಹುಣ್ಣಿಮೆ-ಸಾಂಸ್ಕೃತಿಕ ಸ್ಪರ್ಧೆಗಳ ಊರಣ

» **ಮೊದಲ ಪುಟದಿಂದ**

ಫೆ.12ರ ಬುಧವಾರ ವಿವಿಧ ರಾಜ್ಯ, ರಾಷ್ಟ್ರಮಟ್ಟದಲ್ಲಿ ಭಾಗವಹಿಸಿದ ಪುರುಷ ಮತ್ತು ಮಹಿಳಾ ಆಹ್ವಾನಿತ ಕುಸ್ತಿ ಪಂದ್ಯಾವಳಿಗಳು ಜರುಗಲಿವೆ.

**ಪ್ರತಿಭಾನ್ವಿತರಿಗೆ ಸುವರ್ಣ ಆಹ್ವಾನ:** ತರಳಬಾಳು ಹುಣ್ಣಿಮೆ ಮಹೋತ್ಸವದಲ್ಲಿ ವಿಶಿಷ್ಟ ಸಾಂಪ್ರದಾಯಿಕ ಪ್ರತಿಭೆಗಳಿಗೆ ಅವಕಾಶ ನೀಡುವ ನಿಟ್ಟಿನಲ್ಲಿ ಶ್ರೀಮಠವು ಅನೇಕ ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಿದೆ.

ಫೆ.5ರ ಬುಧವಾರ ವಚನನೃತ್ಯ ಮತ್ತು ಜನಪದ ನೃತ್ಯ ಸ್ಪರ್ಧೆಗಳು, ಗುರುವಾರ ಕೃಷಿ ಮತ್ತು ಜಲ ಸಂರಕ್ಷಣೆ ಭಾಷಣ ಸ್ಪರ್ಧೆ, ಶುಕ್ರವಾರ ಭಜನಾ ಮೇಳ, ಶನಿವಾರ ವಿಜ್ಞಾನ ಮೇಳ ಮತ್ತು ವಿಜ್ಞಾನಿಗಳೊಂದಿಗೆ ಸಂವಾದ, ಭಾನುವಾರ ಪ್ರತಿಭಾನ್ವೇಷಣೆ, ಸೋಮವಾರ ಕೋಲಾಟ ಮತ್ತು ಸೋಬಾನೆ ಸ್ಪರ್ಧೆ, ಮಂಗಳವಾರ ಕೃಷಿ ಮೇಳ ಮತ್ತು ರೈತರ ಸಂವಾದ, ಬುಧವಾರ ಕರ್ನಾಟಕ ವಿವಿಧ ಜಾನಪದ ಕಲಾತಂಡಗಳಿಂದ ಕಲಾಪ್ರದರ್ಶನ ಜರುಗಲಿದೆ.

ಫೆ.5ರ ಬೆಳಗ್ಗೆ 10 ಗಂಟೆಗೆ ಜರುಗುವ ವಚನನೃತ್ಯ ಮತ್ತು ಜನಪದ ನೃತ್ಯ ಸ್ಪರ್ಧೆಗಳಲ್ಲಿ ಜಗಳೂರು, ಹರಪನಹಳ್ಳಿ, ದಾವಣಗೆರೆ ಹಾಗೂ ಚಿತ್ರದುರ್ಗ ತಾಲೂಕಿನ ಪ್ರೌಢಶಾಲಾ ವಿದ್ಯಾರ್ಥಿಗಳು ಮಾತ್ರ ಭಾಗವಹಿಸಲು ಅವಕಾಶ ನೀಡಿದ್ದು, ವಿಜೇತರಾದ ತಂಡಗಳಿಗೆ ಪ್ರಥಮ 10,000, ದ್ವಿತೀಯ 7,000, ತೃತೀಯ 5,000ಗಳನ್ನ ನಗದು ಬಹುಮಾನ ಜೊತೆಗೆ ಆಕರ್ಷಕ ಪ್ರಶಸ್ತಿ ಫಲಕಗಳನ್ನು ನೀಡಲಾಗುವುದು.

ಫೆ.6ರ ಬೆಳಗ್ಗೆ 9.30ಕ್ಕೆ ಕೃಷಿ ಮತ್ತು ಜಲ ಸಂರಕ್ಷಣೆ ವಿಷಯಕ್ಕೆ ಸಂಬಂಸಿದಂತೆ ಭಾಷಣ ಸ್ಪರ್ಧೆ ಏರ್ಪಡಿಸಿದ್ದು, ತರಳಬಾಳು ವಿದ್ಯಾಸಂಸ್ಥೆಯ ಸಿರಿಗೆರೆ, ಚಿತ್ರದುರ್ಗ, ಹೊಳಲ್ಕೆರೆ, ದಾವಣಗೆರೆ, ಹರಪ್ಪನಹಳ್ಳಿ ಹಾಗೂ ಭರಮಸಾಗರ ಹೋಬಳಿ ಎಲ್ಲಾ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಮಾತ್ರ ಭಾಗವಹಿಸಲು ಅವಕಾಶ ನೀಡಿದ್ದು, ಪ್ರಥಮ 3000, ದ್ವಿತೀಯ 2000, ತೃತೀಯ 1000 ನಗದು ಬಹುಮಾನಗಳನ್ನ ನೀಡಲಾಗುವುದು.

ಫೆ.7ರ ಬೆಳಗ್ಗೆ 9:30ಕ್ಕೆ ಭಜನಾ ಮೇಳ ಏರ್ಪಡಿಸಿದ್ದು, ಜಗಳೂರು, ಹರಪನಹಳ್ಳಿ, ದಾವಣಗೆರೆ ಹಾಗೂ ಚಿತ್ರದುರ್ಗ ತಾಲೂಕಿನ ಆಸಕ್ತರೂ ಭಾಗವಹಿಸಬಹುದಾಗಿದೆ. ಪ್ರಥಮ 8000, ದ್ವಿತೀಯ, 6,000, ತೃತೀಯ 4000 ರೂಗಳ ಬಹುಮಾನದ ಜೊತೆಗೆ ಪ್ರಯಾಣ ಭತ್ಯೆ ನೀಡಲಾಗುವುದು.

ಫೆ.10ರ ಬೆಳಗ್ಗೆ 9:30ಕ್ಕೆ ಕೋಲಾಟ ಸ್ಪರ್ಧೆ ಏರ್ಪಡಿಸಿದ್ದು, ಜಾನಪದ ಸೊಗಡಿನ ಕಲೆಯ ಜೊತೆಗೆ ಪ್ರತಿ ತಂಡದಲ್ಲಿ 8 ರಿಂದ 10 ಕಲಾವಿದರಿಗೆ ಮಾತ್ರ ಅವಕಾಶ ಇರಲಿದೆ. ಸ್ಪರ್ಧೆಯಲ್ಲಿ ವಿಜೇತರಾದ ತಂಡದವರಿಗೆ ಪ್ರಥಮ 8000, ದ್ವಿತೀಯ 6,000, ತೃತೀಯ 4000 ರಂತೆ ಬಹುಮಾನದ ಜೊತೆಗೆ ಪ್ರಯಾಣ ಭತ್ಯೆ ನೀಡಲಾಗುವುದು.

ಫೆ.11ರ ಬೆಳಗ್ಗೆ 9.30ಕ್ಕೆ ಕೃಷಿ ಮೇಳ ಮತ್ತು ರೈತರ ಸಂವಾದ ಕಾರ್ಯಕ್ರಮ ಇರಲಿದ್ದು, ರಾಜ್ಯದ ಸಮಸ್ತ ರೈತ ಬಂಧುಗಳು ಕಾರ್ಯಕ್ರಮಕ್ಕೆ ಆಗಮಿಸಿ ಆಧುನಿಕ ರೀತಿಯ ಕೃಷಿಗೆ ಸಂಬಂಸಿದಂತಹ ಯಂತ್ರೋಪಕರಣಗಳನ್ನು ಅದರ ಉಪಯೋಗ ಬಗ್ಗೆ ವಿಶೇಷ ಕೃಷಿ ತಜ್ಞರಿಂದ ಮಾಹಿತಿ ಪಡೆಯಬಹುದಾಗಿದೆ.

**ಪ್ರತಿಭಾನ್ವಿತರಿಗೆ ಸುವರ್ಣ ಆಹ್ವಾನ:** ತರಳಬಾಳು ಹುಣ್ಣಿಮೆಯಲ್ಲಿ ಫೆ. 9ರ ಭಾನುವಾರ ಬೆಳಿಗ್ಗೆ 10 ಗಂಟೆಯ ಪ್ರತಿಭಾನ್ವೇಷಣಾ ಸ್ಪರ್ಧೆಗಳು ಸಂಗೀತ, ನೃತ್ಯ, ಅಭಿನಯ ಎಂಬ ಮೂರು ವಿಭಾಗಗಳಲ್ಲಿ ನಡೆಯಲಿವೆ. ಪ್ರತಿ ಭಾಗದಲ್ಲಿ ಕಿರಿಯರ ಹಂತ, ವಯಸ್ಕರಹಂತ, ಹಿರಿಯರ ಹಂತ ಎಂದು ನಿಗದಿಪಡಿಸಿದ್ದು, ವಿಜೇತರಿಗೆ ಪ್ರಥಮ 3000, ದ್ವಿತೀಯ 2000, ತೃತೀಯ 1000 ರೂಗಳ ನಗದು ಬಹುಮಾನಗಳ ಜೊತೆಗೆ ಆಕರ್ಷಕ ಪ್ರಶಸ್ತಿ ಫಲಕವನ್ನು ನೀಡಲಾಗುವುದು.

## ಫಾಸ್ಟ್ ನ್ಯೂಸ್

### ಚಿತ್ರದುರ್ಗ ನಗರಸಭೆ: ಅರ್ಜಿ ಆಹ್ವಾನ

» ಚಿತ್ರದುರ್ಗ

2025–26ನೇ ಸಾಲಿಗೆ ದೀನದಯಾಳ್ ಅಂತ್ಯೋದಯರಾಷ್ಟ್ರೀಯನಗರಜೀವನೋಪಾಯ ಅಭಿಯಾನ ಯೋಜನೆಯಡಿಯಲ್ಲಿ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಆಸ್ತಿತೆರಿಗೆ ಹಾಗೂ ನೀರಿನ ಶುಲ್ಕ ಸಮರ್ಪಕ ವಸೂಲಾತಿಗಾಗಿ ನಗರಸಭೆ ಕಾರ್ಯಾಲಯ ವ್ಯಾಪ್ತಿಯಲ್ಲಿ ರಚಿಸಲಾಗಿರುವ ಅರ್ಹ ಮಹಿಳಾ ಸ್ವ–ಸಹಾಯ ಸಂಘಗಳನ್ನು ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಮಹಿಳಾ ಸ್ವ–ಸಹಾಯ ಸಂಘವು ಈಗಾಗಲೇ ಡೇ–ನಲ್ಮ್ ಅಭಿಯಾನದಡಿನೋಂದಾಯಿಸಿರಬೇಕು ಹಾಗೂ ಪಂಚಸೂತ್ರಗಳನ್ನು ಅನುಸರಿಸುತ್ತಿರಬೇಕು. ಸಂಘದ ಸದಸ್ಯರು ಕನಿಷ್ಠ 7ನೇ ತರಗತಿಯವರೆಗೆ ಶಿಕ್ಷಣ ಹಾಗೂ ಎಲೆಕ್ಟ್ರಾನಿಕ್ ಪರಿಕರಗಳ ಬಳಕೆ ಗೊತ್ತಿರಬೇಕು. ಸಂಘದ ಹೆಸರಿನಲ್ಲಿ ಸಕ್ರಿಯ ಬ್ಯಾಂಕ್ ಖಾತೆ ಹೊಂದಿರಬೇಕು ಹಾಗೂ ಬ್ಯಾಂಕಿನಲ್ಲಿ ತಮ್ಮ ಖಾತೆಯಲ್ಲಿ ಸಾಲ ಪಡೆದು ನಿಯಮಿತವಾಗಿ ಮರು ಪಾವತಿ ಮಾಡಿರಬೇಕು. ಆಸಕ್ತ ಮಹಿಳಾ ಸ್ವ–ಸಹಾಯ ಸಂಘಗಳು ನಗರಸಭಾ ಕಾರ್ಯಾಲಯ ಚಿತ್ರದುರ್ಗ ಕಚೇರಿಯಲ್ಲಿ ಡೇ–ನಲ್ಮ್ ಶಾಖೆಗೆ ಸಂಪರ್ಕಿಸಬೇಕು ಎಂದು ಚಿತ್ರದುರ್ಗ ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

### ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಫೆಬ್ರವರಿ 05 ಮತ್ತು 06ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ಫೆ.05ರಂದು ಬೆಳಿಗ್ಗೆ 6ಕ್ಕೆ ಬೆಂಗಳೂರಿನಿಂದ ಹೊರಟು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ನಂತರ ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಪಿಳ್ಳೆಕೆರೆನಹಳ್ಳಿಯ ಬಾಪೂಜಿ ಸಮೂಹ ಸಂಸ್ಥೆಗಳ ಸಹಯೋಗದಲ್ಲಿ ಬಾಪೂಜಿ ಸಮೂಹ ಸಭಾಂಗಣದಲ್ಲಿ ಏರ್ಪಡಿಸಿರುವ ಉಪನ್ಯಾಸ ಮತ್ತು ಸಂವಾದ ಕಾರ್ಯಕ್ರಮ ಉದ್ಘಾಟಿಸುವರು. ಮಧ್ಯಾಹ್ನ 1ಕ್ಕೆ ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ಭೇಟಿ ನೀಡುವರು. ಮಧ್ಯಾಹ್ನ 2ಕ್ಕೆ ಚಿತ್ರದುರ್ಗ ಜಿಲ್ಲೆಯ ತರಳಬಾಳು ರಸ್ತೆಯಲ್ಲಿರುವ ಚಿಕ್ಕಪುರ ಗೊಲ್ಲರಹಟ್ಟಿಗೆ ಭೇಟಿ ನೀಡುವುದು. ಸಂಜೆ 6ಕ್ಕೆ ಚಿತ್ರದುರ್ಗ ಜಿಲ್ಲೆಯ ಸಿರಿಗೆರೆ ತರಳಬಾಳು ಜಗದ್ಗುರು ಬೃಹನ್ಮಠ ವತಿಯಿಂದ ವಾರ್ಷಿಕ ಮಹೋತ್ಸವದಲ್ಲಿ "ಮಹಿಳೆ ಮತ್ತು ಸಮಾಜ" ವಿಷಯದ ಕುರಿತು ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸುವುದು. ನಂತರ ರಾತ್ರಿ ಚಿತ್ರದುರ್ಗದಲ್ಲಿ ವಾಸ್ತವ್ಯ ಹೂಡುವರು. ಫೆ.06ರಂದು ಬೆಳಿಗ್ಗೆ 11ಕ್ಕೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಎಸ್‌ಹೆಚ್‌ಡಬ್ಲ್ಯೂ ಜಿಲ್ಲೆಯಲ್ಲಿ ಜಾರಿಯಾದ ಬಗ್ಗೆ ಹಾಗೂ ಪ್ರಕರಣಗಳು ದಾಖಲಾದ ಬಗ್ಗೆ ಅಂಕಿ ಅಂಶಗಳೊಂದಿಗೆ ಚರ್ಚೆ, ಸರ್ಕಾರಿ, ಖಾಸಗಿ ಸಂಸ್ಥೆಗಳಲ್ಲಿ ಸ್ಥಳೀಯ ಹಾಗೂ ಆಂತರಿಕ ದೂರು ಸಮಿತಿ ಬಗ್ಗೆ ಪರಿಶೀಲನೆ, ಮಹಿಳಾ ದೌರ್ಜನ್ಯ ಪ್ರಕರಣಗಳ ಬಗ್ಗೆ ಚರ್ಚೆ, ಮಹಿಳಾ ರಿಸರ್ವೇಶನ್, ಕಾಲೇಜು ವಿದ್ಯಾರ್ಥಿನಿಯರು ಮತ್ತು ಮಹಿಳೆಯರ ಸುರಕ್ಷತೆಯ ಬಗ್ಗೆ ಜಿಲ್ಲಾಡಳಿತ ತೆಗೆದುಕೊಂಡ ಕ್ರಮದ ಬಗ್ಗೆ ಚರ್ಚೆ ನಡೆಸುವರು. ಮಧ್ಯಾಹ್ನ 1ಕ್ಕೆ ಪತ್ರಿಕಾಗೋಷ್ಠಿ ನಡೆಸುವರು. ಸಂಜೆ 4.30ಕ್ಕೆ ಚಿತ್ರದುರ್ಗದಿಂದ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

### ಫೆ.04ರಂದು ಸವಿತಾ ಮಹರ್ಷಿ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಫೆ.04ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸವಿತಾ ಮಹರ್ಷಿ ಜಯಂತಿ ಆಚರಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ. ಗೋಪಾಲಕೃಷ್ಣ, ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದಚಿದಾನಂದಎಂಗೌಡ,ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ, ಸವಿತಾ ಸಮಾಜ ಅಧ್ಯಕ್ಷ ಎನ್.ಚಂದ್ರಶೇಖರ್, ಜಿಲ್ಲಾ ಕಾರ್ಯಾಧ್ಯಕ್ಷ ಎನ್.ಶ್ರೀನಿವಾಸ್, ತಾಲ್ಲೂಕು ಅಧ್ಯಕ್ಷ ಆರ್.ಶ್ರೀನಿವಾಸ್, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಆರ್.ನಾಗರಾಜ್ ಸೇರಿದಂತೆ ಸವಿತಾ ಸಮಾಜದ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು. ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್ ಉಪನ್ಯಾಸ ನೀಡುವರು. ಓ.ಮೂರ್ತಿ ಮತ್ತು ಸಂಗಡಿಗರು ಗೀತಗಾಯನ ನಡೆಸಿಕೊಡುವರು ಎಂದು ಡಾ.ಬಿ.ಎಂ.ಗುರುನಾಥ ತಿಳಿಸಿದ್ದಾರೆ.

#### ಪೂರ್ವಭಾವಿ ಸಭೆಯಲ್ಲಿ ಉಪವಿಭಾಗಾಧಿಕಾರಿ ಡಾ.ಎನ್.ವೆಂಕಟೇಶ್ ನಾಯ್ಕ್

# ಫೆ.10ರಂದು ಕಾಯಕ ಶರಣರ ಜಯಂತಿ

» ಚಿತ್ರದುರ್ಗ



ಜಿಲ್ಲಾ ಕೇಂದ್ರದಲ್ಲಿ ಸರ್ಕಾರದ ವತಿಯಿಂದ ಇದೇ ಫೆಬ್ರವರಿ 10ರಂದು ಕಾಯಕ ಶರಣರಾದ ಮಾದರ ಚೆನ್ನಯ್ಯ, ಮಾದರ ಧೂಳಯ್ಯ, ಡೋಹರ ಕಕ್ಕಯ್ಯ, ಉರಿಲಿಂಗ ಪೆದ್ದಿ ಹಾಗೂ ಸಮಗಾರ ಹರಳಯ್ಯ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಉಪವಿಭಾಗಾಧಿಕಾರಿ ಡಾ.ಎನ್. ವೆಂಕಟೇಶ್ ನಾಯ್ಕ್ ಹೇಳಿದರು.

ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಕಾಯಕರ ಶರಣರ ಜಯಂತಿ ಆಚರಿಸುವ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಮಾಜದ ಮುಖಂಡರ ಸಲಹೆಯಂತೆ ಕಾಯಕ ಶರಣರ ಜಯಂತಿಯನ್ನು ಫೆ.10ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಥವಾ ಜಿಲ್ಲಾಧಿಕಾರಿಗಳ ಕಚೇರಿ ಹಿಂಭಾಗದ ಪತ್ರಿಕಾ ಭವನದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

ಶಿಷ್ಠಾಚಾರದ ಅನ್ವಯ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಲಾಗುವುದು. ಜಯಂತಿ ಅಂಗವಾಗಿ ಅಂದು ಕಾಯಕ ಶರಣರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಅವರ ವಚನಗಳ ಗೀತಗಾಯನ ಹಾಗೂ ಸಂಪನ್ಮೂಲ ವ್ಯಕ್ತಿಗಳಿಂದ ಕಾಯಕ ಶರಣರ ಆದರ್ಶ, ಚಿಂತನೆ ಹಾಗೂ ಸಮಾಜಕ್ಕೆ ಅವರ ಕೊಡುಗೆ ತಿಳಿಸುವ ನಿಟ್ಟಿನಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದರು.

ಜಯಂತಿ ಅಂಗವಾಗಿ ಚಿತ್ರದುರ್ಗ ನಗರದ ನಗರಸಭೆಯ ಬಳಿಯ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿ ಬಳಿಯಿಂದ ಕಾಯಕ ಶರಣರ ಭಾವಚಿತ್ರದ ಮೆರವಣಿಗೆಗೆ ಚಾಲನೆ ನೀಡಿ, ಒನಕೆ ಓಬವ್ವ ವೃತ್ತದ ಮೂಲಕ ಜಿಲ್ಲಾಧಿಕಾರಿಗಳ ಕಚೇರಿವರೆಗೂ ಮೆರವಣಿಗೆ ನಡೆಸಲಾಗುವುದು ಎಂದರು.

ಕಾಯಕ ಶರಣರಿಗೆ ಗೌರವ ಹಾಗೂ ಶರಣರ ಸಂದೇಶ ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಕಾಯಕ ಶರಣರ ಜಯಂತಿ ಕಾರ್ಯಕ್ರಮವನ್ನುಅರ್ಥಪೂರ್ಣಹಾಗೂ ವ್ಯವಸ್ಥಿತವಾಗಿ ಆಯೋಜಿಸಬೇಕು.

ನಗರದ ಪ್ರಮುಖ ರಸ್ತೆಗಳಲ್ಲಿ ಬ್ಯಾನರ್ ಅಳವಡಿಸಬೇಕು. ಕಳೆದ 25 ರಿಂದ 30 ವರ್ಷಗಳ ಕಾಲ ಜನಪರವಾಗಿ ಹೋರಾಟ ಮಾಡಿದ ಐದು ಮಂದಿ ದಲಿತ ಹೋರಾಟಗಾರರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ನಗರಸಭಾ ಮಾಜಿ ಅಧ್ಯಕ್ಷ ಡಿ.ಎನ್.ಮೈಲಾರಪ್ಪ ಹಾಗೂ ದಲಿತ ಮುಖಂಡ ಜೆ.ಜೆ.ಹಟ್ಟಿ ಬಿ.ರಾಜಪ್ಪ ಸಭೆಗೆ ಮನವಿ ಮಾಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ, ಕಣಿವೆ ಮಾರಮ್ಮ ಕನ್ನಡ ಕಲಾಭಿಮಾನಿಗಳ ಸಂಘದ ಅಧ್ಯಕ್ಷ ಎಂ.ತಿಪ್ಪೇಸ್ವಾಮಿ, ಮುಖಂಡರಾದ ಅಣ್ಣಪ್ಪ, ಜಗದೀಶ್, ಹನುಮಂತಪ್ಪ, ಮಲ್ಲಿಕಾರ್ಜುನ್, ಪುರುಷೋತ್ತಮ್ ಸೇರಿದಂತೆ ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ನಗರಸಭೆಯ ಪುಟ್ಟಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

#### ಶಾಸಕ ಕೆ.ಎಸ್.ಬಸವಂತಪ್ಪ ಗ್ರಾಪಂ ಅಧಿಕಾರಿಗಳಿಗೆ ಸೂಚನೆ

## ಗ್ರಾಮ ನೈರ್ಮಲ್ಯ ಕಾಪಾಡಲು ಹೆಚ್ಚು ಒತ್ತು ಕೊಡಿ

» ದಾವಣಗೆರೆ



ಆರೋಗ್ಯ ಮತ್ತು ಸ್ವಚ್ಛತೆ ಒಂದೇ ನಾಣ್ಯದ ಎರಡು ಮುಖಗಳು. ಸ್ವಚ್ಛತೆ ಹೊರತಾಗಿ ಆರೋಗ್ಯ ಇರಲು ಸಾಧ್ಯವಿಲ್ಲ. ಆದ್ದರಿಂದ ಗ್ರಾಮ ನೈರ್ಮಲ್ಯಕ್ಕೆ ಹೆಚ್ಚು ಆದ್ಯತೆ ನೀಡಬೇಕೆಂದು ಆದ್ಯತೆ ನೀಡಬೇಕೆಂದು ಶಾಸಕ ಕೆ.ಎಸ್.ಬಸವಂತಪ್ಪ ಗ್ರಾಮಸ್ಥರಿಗೆ ಕಿವಿಮಾತು ಹೇಳಿದರು.

ಮಾಯಕೊಂಡ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಕುರ್ಕಿ ಗ್ರಾಮ ಪಂಚಾಯಿತಿಯ ಹಿರೇತೊಗಲೇರಿ ಗ್ರಾಮದಲ್ಲಿ ಗ್ರಾಮ್ಮಿಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ 2023–24ನೇ ಸಾಲಿನ ಎಸ್‌ಬಿಎಂಜಿ ಯೋಜನೆಯಡಿ ಮಂಜೂರಾಗಿರುವ 2.48 ಕೋಟಿ ರೂ. ವೆಚ್ಚದ ತಾಲೂಕು ಮಟ್ಟದ ಕಸ ವಿಲೇವಾರಿ ಘಟಕ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಜನರಿಗೆ ನೈರ್ಮಲ್ಯ ಮತ್ತು ಆರೋಗ್ಯ ಸದೃಢವಾಗಿರಬೇಕಾದರೆ ಪ್ರತಿನಿತ್ಯ ಗ್ರಾಮದಲ್ಲಿ ಸ್ವಚ್ಛತೆ ಕಾಪಾಡಿದಾಗ ಮಾತ್ರ ಗ್ರಾಮದ ಜನರು ಆರೋಗ್ಯಪೂರ್ಣ ಜೀವನ ನಡೆಸಲು ಸಾಧ್ಯ ಎಂದರು.

ಕುರ್ಕಿ ಗ್ರಾಮದ ಎರಡು ಎಕರೆ ಪ್ರದೇಶದಲ್ಲಿ ಕಸ ವಿಲೇವಾರಿ ಘಟಕ ನಿರ್ಮಿಸುತ್ತಿದ್ದು, ತಾಲೂಕಿನ ಒಣ ಕಸ ಸಂಗ್ರಹಿಸಿ ಇಲ್ಲಿನ ಒಣ ಕಸ ನಿರ್ವಹಣ ಘಟಕದ ಮೂಲಕ ಪ್ಲಾಸ್ಟಿಕ್, ಕಬ್ಬಿಣ, ಗಾಜು ಇತ್ಯಾದಿಗಳನ್ನು ವಿಂಗಡಿಸಿ ಪುನರ್ ಉತ್ಪಾದನೆ ಮಾಡುವ ಉದ್ದಿಮೆದಾರರಿಗೆ ಕಳುಹಿಸಲಾಗುತ್ತದೆ. ಇದನ್ನು ಸದುಪಯೋಗ ಮಾಡಿಕೊಳ್ಳಬೇಕೆಂದರು.

ಕ್ಷೇತ್ರದ ಬಹುತೇಕ ಗ್ರಾಪಂಗಳಲ್ಲಿ ಘಟಕಗಳು ನೆನಗುದಿಗೆ ಬಿದ್ದಿವೆ. ಕೆಲವೊಂದು ಗ್ರಾಪಂಗಳಲ್ಲಿ ಕಸ ವಿಲೇವಾರಿ ಘಟಕಗಳು ಸರಿಯಾಗಿ ನಿರ್ವಹಣೆ ಮಾಡುತ್ತಿಲ್ಲ.

ಕಸ ಸಂಗ್ರಹಿಸುವ ಆಟೋಗಳು ಮೂಲೆ ಸೇರಿ ತುಕ್ಕು ಹಿಡಿಯುತ್ತಿವೆ. ಕುರ್ಕಿ ಗ್ರಾಮದ ಕಸ ವಿಲೇವಾರಿ ಘಟಕವನ್ನು ಇಲ್ಲಿನ ಗ್ರಾಪಂ ಪಿಡಿಒ, ಅಧ್ಯಕ್ಷರು, ಸದಸ್ಯರು ಮತ್ತು ಅಧಿಕಾರಿಗಳ ವರ್ಗ ಸುಸ್ಥಿತಿಯಲ್ಲಿ ಇಟ್ಟುಕೊಂಡು ಉತ್ತಮವಾಗಿ ನಿರ್ವಹಿಸುತ್ತಿದ್ದಾರೆ. ಕುರ್ಕಿ ಗ್ರಾಪಂ ಇತರೆ ಗ್ರಾಪಂಗಳಿಗೆ ಮಾದರಿಯಾಗಿದ್ದು, ಇದನ್ನು ಎಲ್ಲಾ ಗ್ರಾಪಂ ಪಿಡಿಒಗಳು, ಅಧ್ಯಕ್ಷರು, ಸದಸ್ಯರು, ಅಳವಡಿಸಿಕೊಳ್ಳಬೇಕು. ಸಂಬಂಧಪಟ್ಟ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಆಗಾಗ ಭೇಟಿ ನೀಡಿ ಘಟಕಗಳುಸ ಸಮರ್ಪಕ ನಿರ್ವಹಣೆಗೆ ಕ್ರಮ ತೆಗೆದುಕೊಳ್ಳಬೇಕೆಂದರು.

ಗ್ರಾಮ ಸ್ವಚ್ಛತೆಗಾಗಿ ಸರ್ಕಾರ ಪ್ರತ್ಯೇಕ ಅನುದಾನ ನೀಡುತ್ತಿದ್ದು, ಇದನ್ನು ಗ್ರಾಪಂಗಳು ಸಮರ್ಪಕವಾಗಿ ಬಳಸಿಕೊಂಡು ಗ್ರಾಮಗಳ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಸ್ವಚ್ಛತೆ ಮಾಡಲು ನಗರ ಪ್ರದೇಶದಲ್ಲಿ ಪೌರಕಾರ್ಮಿಕರನ್ನು ನೇಮಿಸುವಂತೆ ಗ್ರಾಮೀಣ ಪ್ರದೇಶದಲ್ಲೂ ಪ್ರತಿನಿತ್ಯ ಸ್ವಚ್ಛತೆ ಮಾಡಲು ಪೌರಕಾರ್ಮಿಕರನ್ನು ನೇಮಿಸಬೇಕೆಂದು ಈ ಹಿಂದೆ ನಡೆದ ಅಧಿವೇಶನದಲ್ಲಿ ಚರ್ಚೆ ಮಾಡಿ ಸರ್ಕಾರದ ಮೇಲೆ ಒತ್ತಡ ಹಾಕಿದ್ದೇನೆ. ಪ್ರತಿದಿನ ಸ್ವಚ್ಛತೆ ಮಾಡಿ ನಗರ ಸೌಂದರ್ಯ ಕಾಪಾಡುವಂತೆ ಗ್ರಾಮೀಣ ಪ್ರದೇಶದಲ್ಲೂ ಕೂಡ ಗ್ರಾಮದ ಸೌಂದರ್ಯ ಕಾಪಾಡುವ ಕೆಲಸ ಆಗಬೇಕಾಗಿದೆ ಎಂದರು.ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಇಲಾಖೆ ಇಇ ಟಾಟಾ ಶಿವನ್, ಎಇಇ ಶಿವಮೂರ್ತಿ, ಗ್ರಾಪಂ ಅಧ್ಯಕ್ಷರಾದ ನಾಗಮ್ಮ, ಗ್ರಾಪಂ ಪಿಡಿಒ ಸುರೇಖಾ, ಗ್ರಾಪಂ ಸದಸ್ಯರು, ಮುಖಂಡರಾದ ನಿಂಗಪ್ಪ, ಬಸವರಾಜಪ್ಪ, ರಾಜಪ್ಪ, ವಾಸು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

#### ಉಪವಿಭಾಗಾಧಿಕಾರಿ ಡಾ.ಎನ್.ವೆಂಕಟೇಶ್ ನಾಯ್ಕ್ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ

## ಫೆ.15ರಂದು ಸಂತ ಶ್ರೀ ಸೇವಾಲಾಲ್ ಜಯಂತಿ



» ಚಿತ್ರದುರ್ಗ

ಜಿಲ್ಲಾ ಕೇಂದ್ರದಲ್ಲಿ ಸರ್ಕಾರದ ವತಿಯಿಂದ ಇದೇ ಫೆಬ್ರವರಿ 15ರಂದು ಸಂತ ಶ್ರೀ ಸೇವಾಲಾಲ್ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದುಎಂದುಉಪವಿಭಾಗಾಧಿಕಾರಿಡಾ.ಎನ್.ವೆಂಕಟೇಶ್ ನಾಯ್ಕ್ ಹೇಳಿದರು. ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಸಂತ ಶ್ರೀ ಸೇವಾಲಾಲ್ ಜಯಂತಿ ಆಚರಿಸುವ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಂತ ಶ್ರೀ ಸೇವಾಲಾಲ್ ಜಯಂತಿ ಆಚರಣೆಯನ್ನು ಸಮಾಜದ ಮುಖಂಡರ ಸಮ್ಮತಿಯಂತೆ ಫೆ.15ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಚರಿಸಲಾಗುವುದು. ಜಯಂತಿ ಅಂಗವಾಗಿ ಗೀತಗಾಯನ ಮತ್ತು ಸಂತ ಶ್ರೀ ಸೇವಾಲಾಲ್ ಅವರ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಗುವುದು ಎಂದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ್, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಸಮಾಜದ ಮುಖಂಡರಾದ ಜಿ.ರಾಜನಾಯ್ಕ್, ಕೆ.ಮಂಜುನಾಥ ನಾಯ್ಕ್, ನರೇನಹಳ್ಳಿ ಅರುಣ್ ಕುಮಾರ್, ಪ್ರಕಾಶ್ ರಾಮನಾಯ್ಕ್, ಎಸ್.ಆಲೂನಾಯ್ಕ್, ಸತೀಶ್ ನಾಯ್ಕ್, ಎಂ.ಎಸ್.ಶಿವನಾಯ್ಕ್, ಶ್ರೀನಿವಾಸ್ ನಾಯ್ಕ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಮೂಡಲಪಾಯ ಯಕ್ಷಗಾನವು ಅಳಿವಿನ ಹಂಚಿನಲ್ಲಿರುವುದು ಸೋಜಿಗ

» ಹೊಸದುರ್ಗ

ಈಗಿನ ಆಧುನಿಕ ಯುಗದಲ್ಲಿ ಇಂದಿನ ಪರಂಪರೆ ಇಂದಿನ ಸಂಸ್ಕೃತಿ ಮುಖ್ಯವಾಗಿ ಮೂಡಲಪಾಯ ಯಕ್ಷಗಾನವು ಅಳಿವಿನ ಹಂಚಿನಲ್ಲಿರುವುದು ಸೋಜಿಗ, ಯಕ್ಷಗಾನ ಅಕಾಡೆಮಿಗಳು ಇಂತಹ ಕಲೆಯನ್ನು ಜೀವಂತವಾಗಿಸುವ ನಿಟ್ಟಿನಲ್ಲಿ ಈ ರೀತಿಯಾದಂತಹ ಕಾರ್ಯಕ್ರಮಗಳನ್ನು ನೀಡಿ ಮಕ್ಕಳಲ್ಲಿ ಅರಿವನ್ನು ಮೂಡಿಸುವುದು ತುಂಬಾ ಸಂತೋಷದ ಸಂಗತಿ ಎಂದು ರಾಣೇಬೆನ್ನೂರಿನ ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿ ಪವಿತ್ರ ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ನಾಟಕ ಯಕ್ಷಗಾನ ಅಕಾಡೆಮಿ ಬೆಂಗಳೂರು ಹಾಗೂ ರಹಮಾನೀಯ ಸಾಂಸ್ಕೃತಿಕ ಸಂಘ ಹೊಸದುರ್ಗ ಇವರ ಸಂಯುಕ್ತ ಆಶ್ರಯದಲ್ಲಿ ಪಟ್ಟಣದಲ್ಲಿ ಅಯೋಜಿಸಲಾಗಿದ್ದ ಎರಡು ತಿಂಗಳ ಮೂಡಲಪಾಯ ತರಬೇತಿ ಕಾರ್ಯಕ್ರಮವನ್ನ ನಗಾರಿ ಭಾರಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.ಮೂಡಲಪಾಯ ಯಕ್ಷಗಾನದ ಉಳಿವಿಗಾಗಿ ರಹಮನಿಯ ಸಾಂಸ್ಕೃತಿಕ ಸಂಘವು ಶಬೀನಾ ಮೇಡಂ ಅವರ ನೇತೃತ್ವದಲ್ಲಿ ಈ ಕಾರ್ಯಕ್ರಮ ರೂಪುಗೊಂಡಿರುವುದು ಒಂದು ಸಂಭ್ರಮದ ಸಂಗತಿ ಇದೇ ರೀತಿ ಆಧುನಿಕ ಯುಗದಲ್ಲಿ ಮಕ್ಕಳಲ್ಲಿ ಆಸಕ್ತಿ ಮೂಡಿಸುವುದು ಅತ್ಯವಶ್ಯಕ ಎಂದು ಹೇಳಿದರು.




#### ಪ್ರಮುಖ ಸುದ್ದಿ

# ವಚನಗಳ ಮೂಲಕವೇ ಸಾರ್ವಜನಿಕರಲ್ಲಿ ಧಾರ್ಮಿಕ ಜಾಗೃತಿ ಮೂಡಿಸಿದ ಮಹಾನ್ ಶರಣ ಮಡಿವಾಳಮಾಚಿದೇವ

» ಚಳ್ಳಕೆರೆ




ಸಮಾಜದಲ್ಲಿ ಬದಲಾವಣೆಯ ಪರ್ವವನ್ನು ಆರಂಭಿಸಿದ ಅನೇಕ ಧಾರ್ಶನಿಕರು ತಮ್ಮದೇಯಾದ ವಚನಗಳ ಮೂಲಕ ಜನರಲ್ಲಿ ಧಾರ್ಮಿಕ ಜಾಗೃತಿ ಮೂಡಿಸಲು ಶ್ರಮಿಸಿದ್ದಾರೆ. ವಿಶೇಷವಾಗಿ ಮಡಿವಾಳಮಾಚಿದೇವ ವಚನಗಳು ಸಾರ್ವಜನಿಕರಲ್ಲಿ ಪರಿವರ್ತನೆ ಉಂಟುಮಾಡಲು ಸಹಕಾರಿಯಾಗಿವೆ ಎಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸೋಮವಾರ ತಾಲ್ಲೂಕು ಪಂಚಾಯಿತಿ ಕಾರ್ಯಲಯದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ಮಡಿವಾಳ ಸಮುದಾಯದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮಡಿವಾಳಮಾಚಿದೇವ ಜಯಂತಿಯನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಮಡಿವಾಳಮಾಚಿದೇವರು ನಿರಂತರ ಕಾಯಕಯೋಗಿಯಾಗಿದ್ದರು, ಸದಾಕಾಲ ಧಾರ್ಮಿಕ ವಿಚಾರಧಾರೆಗಳನ್ನು ಎಲ್ಲರಿಗೂ ತಲುಪಿಸುವ ಕಾರ್ಯವನ್ನು ಪ್ರಾಮಾಣಿಕವಾಗಿ ಮಾಡಿದವರು, ಇಂದು ಮಡಿವಾಳ ಸಮುದಾಯ ಜನರಲ್ಲಿ ಗುರುತಿಸಿಕೊಳ್ಳಲು ಮಡಿವಾಳ ಮಾಚಿದೇವರ ವಚನಗಳು ಸ್ಫೂರ್ತಿ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ ತಹಶೀಲ್ದಾರ್ ರೇಹಾನ್‌ಪಾಷ, ರಾಜ್ಯ ಸರ್ಕಾರ ಇಂತಹ ಮಹಾನೀಯರ ವಚನಗಳು ಸಮಾಜದ ಎಲ್ಲಾ ವರ್ಗಕ್ಕೂ ತಲುಪಿಸಬೇಕೆಂಬ ದೂರದೃಷ್ಟಿಯಿಂದ ಮಡಿವಾಳಮಾಚಿದೇವ ಜಯಂತಿಯನ್ನು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮೂಲಕ ನಡೆಸಲಾಗುತ್ತಿದೆ. ಧಾರ್ಮಿಕ ಪರಿತರ್ವನೆಯ ಹರಿಕಾರರಲ್ಲಿ ಮಡಿವಾಳಮಾಚಿದೇವರು ಒಬ್ಬರು ಎಂದರು. ಮಡಿವಾಳಮಾಚಿದೇವರ ಬಗ್ಗೆ ಕೃಷಿ ಜಂಟಿನಿರ್ದೇಶಕ ಟಿ.ಮಂಜುನಾಥ ಉಪನ್ಯಾಸ ನೀಡಿದರು. ಸಂಜೀವಿನಿ ಲ್ಯಾಬ್‌ಟೆಕ್ನಿಷನ್ ಎಂ.ಎನ್.ಮೃತ್ಯುಂಜಯ ಮಾತನಾಡಿ, ಮಡಿವಾಳಸಮಾಜಕ್ಕೆ ರಾಜಕೀಯ, ಶೈಕ್ಷಣಿಕ, ಸಾಮಾಜಿಕ ಪ್ರಾತಿನಿಧ್ಯ ದೊರೆಯಬೇಕಿದೆ. ಸಮಾಜದ ಮಕ್ಕಳಿಗೆ ಶಿಕ್ಷಣ ಕೊಡಿಸುವ ಮೂಲಕ ಸಮಾಜಮುಖಿ ಕಾರ್ಯಗಳನ್ನು ಮಾಡಬೇಕಿದೆ. ಮಡಿವಾಳ ಸಮಾಜಕ್ಕೆ ಎಸ್ಸಿ ಮೀಸಲಾತಿ ಕೊಡಿಸಲು ಶಾಸಕರು ಮುಂದಾಗಬೇಕೆಂದರು.

ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ರಾಮಜ್ಜ, ಗೌರವಾಧ್ಯಕ್ಷ ಎನ್. ಮಂಜುನಾಥ, ಅಧ್ಯಕ್ಷ ಎಂ.ನಾಗರಾಜು, ಕಾರ್ಯದರ್ಶಿ ಕುಶಾಲಪ್ಪ, ಖಜಾಂಚಿ ಆರ್ಟ್ಸ್‌ಸನ್‌ಪ್ರಕಾಶ್, ವಿಜಯಕುಮಾರ್, ಇಒ ಶಶಿಧರ, ಪೌರಾಯುಕ್ತ ಜಗರೆಡ್ಡಿ, ನಗರಸಭಾ ಸದಸ್ಯ ಬಿ.ಟಿ.ರಮೇಶ್‌ಗೌಡ, ಮುಖಂಡರಾದ ವೇದಮೂರ್ತಿ, ಜೀವನ್, ಓಂಕಾರಪ್ಪ, ಮಹಿಳಾಘಟಕದ ಅಧ್ಯಕ್ಷೆ ಶೈಲಜಾಮಂಜುನಾಥ, ಎನ್.ಮಂಜಳಾ ಮುಂತಾದವರು ಉಪಸ್ಥಿತರಿದ್ದರು.



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068




# ಅಭಿವೃದ್ಧಿಯ ಪಥದಲ್ಲಿ ಭಾರತ....

**ಇದನ್ನು ವಿಶ್ವದ ಮೂರು ಬಲಿಷ್ಠ ಆರ್ಥಿಕತೆಯ ಹೊಂದಿರುವ ದೇಶಗಳ ಒಟ್ಟು ಪರಿಸ್ಥಿತಿಯನ್ನು ಅವಲೋಕಿಸಿದಾಗ ಯಾವ ರೀತಿ ಅಂದಾಜು ಮಾಡಬಹುದು ಎಂಬ ಒಂದು ಸರಳ ವಿಶ್ಲೇಷಣೆ.....**

ವಿಶ್ವದ ಅತಿ ದೊಡ್ಡ ಮತ್ತು ಶ್ರೀಮಂತ ಹಣಕಾಸು ವ್ಯವಸ್ಥೆ ಹೊಂದಿರುವ ಅಮೆರಿಕಾದ ಒಟ್ಟು ಆರ್ಥಿಕತೆಯ ಗಾತ್ರ 27 ಟ್ರಿಲಿಯನ್, ಎರಡನೇ ಸ್ಥಾನದಲ್ಲಿರುವ ಚೀನಾದ ಆರ್ಥಿಕತೆ 17 ಟ್ರಿಲಿಯನ್, ಮೂರನೆಯ ಸ್ಥಾನದಲ್ಲಿ ಜರ್ಮನಿ ಹಾಗು ನಾಲ್ಕನೆಯ ಸ್ಥಾನದಲ್ಲಿ ಜಪಾನ್ ಮತ್ತು ಐದನೆಯ ಸ್ಥಾನದಲ್ಲಿರುವ ಭಾರತದ ಎಕಾನಮಿ 4.1 ಟ್ರಿಲಿಯನ್....

ಅಮೆರಿಕಾದ ಒಟ್ಟು ಜನಸಂಖ್ಯೆ ಸುಮಾರು 33 ಕೋಟಿ, ಚೀನಾದ ಒಟ್ಟು ಜನಸಂಖ್ಯೆ 141 ಕೋಟಿ, ಭಾರತದ ಜನಸಂಖ್ಯೆ 143 ಕೋಟಿ ಆಸು ಪಾಸಿನಲ್ಲಿದೆ.....

ಅಮೆರಿಕಾದ ಒಟ್ಟು ಭೌಗೋಳಿಕ ವಿಸ್ತೀರ್ಣ 9.8 ಸ್ಕೇರ್ ಕಿಲೋಮೀಟರ್, ಚೀನಾದ ವಿಸ್ತೀರ್ಣ 9.6 ಸ್ಕೇರ್ ಕಿಲೋಮೀಟರ್, ಭಾರತದ ಒಟ್ಟು ವಿಸ್ತೀರ್ಣ ಸುಮಾರು 3.25 ಸ್ಕೇರ್ ಕಿಲೋಮೀಟರ್...

ಅಮೆರಿಕಾದ ತಲಾ ಆದಾಯ 70000 ಅಮೆರಿಕನ್ ಡಾಲರ್, ಚೀನಾದ ತಲಾ ಆದಾಯ ಸುಮಾರು 19000 ಡಾಲರ್,

ಭಾರತದ ತಲ ಆದಾಯ ಸುಮಾರು 7000 ಸಾವಿರ ಡಾಲರ್. ಅಂದರೆ ಇವುಗಳ ನಡುವಿನ ವ್ಯತ್ಯಾಸವನ್ನು ಗಮನಿಸಿ. ಭಾರತದ ಈಗಿನ ಪ್ರಧಾನಿಗಳ ಬಹುದೊಡ್ಡ ಗುರಿ ಭಾರತವನ್ನು ಐದು ಟ್ರಿಲಿಯನ್ ಆರ್ಥಿಕತೆಯನ್ನಾಗಿ ಮಾಡಿ ವಿಶ್ವದಲ್ಲಿ ಮೂರನೆಯ ಬಹುದೊಡ್ಡ ಆರ್ಥಿಕತೆ ಮಾಡುವ ಕನಸನ್ನ ಹೊಂದಿದ್ದಾರೆ. ಇದು ಆರ್ಥಿಕ ದೃಷ್ಟಿಯಿಂದ ಅಭಿವೃದ್ಧಿಯ ದೃಷ್ಟಿಯಿಂದ ಒಳ್ಳೆಯ ಆಲೋಚನೆ ನಿಜ ಆದರೆ ಇದರ ಇನ್ನೊಂದು ಮುಖ ಮತ್ತು ಇದಕ್ಕಾಗಿ ದೇಶದ ಜನತೆ ಮಾಡಬೇಕಾದ ತ್ಯಾಗ, ಶ್ರಮದ ಬಗ್ಗೆಯೂ ಕೂಡ ಸಣ್ಣದಾಗಿ ಗಮನಹರಿಸಬೇಕಿದೆ...


ಮೊದಲನೆಯದಾಗಿ, ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೆ ಹಾಗೆಯೇ ಪೂರ್ವ ಪಶ್ಚಿಮ ದಿಕ್ಕುಗಳಲ್ಲಿ ಸಹ ಪರಿಸರದ ಮೇಲೆ ಬಹುದೊಡ್ಡ ಒತ್ತಡ ಬೀಳುತ್ತಿದೆ. ಗಾಳಿ, ನೀರು, ಆಹಾರ, ಭೂಮಿಯ ಫಲವತ್ತತೆ, ಹೆಚ್ಚು ಕಡಿಮೆ ಮಲಿನವಾಗುತ್ತಿದೆ ಅಥವಾ ವಿಷಯವಾಗುತ್ತಿದೆ ಅಥವಾ ವಿನಾಶದ ಹಂಚಿಗೆ ತಲುಪುತ್ತಿದೆ....

ಎರಡನೆಯದಾಗಿ, ಇದರಿಂದಾಗಿ ಮನುಷ್ಯನ ದೇಹ ಮತ್ತು ಮನಸ್ಸುಗಳ ಮೇಲೆ ಸಹ ದುಷ್ಪರಿಣಾಮ ಬೀರಿ ಆತನ ಜೀವನನೋತ್ಸಾಹ ಮತ್ತು ಆರೋಗ್ಯದಲ್ಲಿ ಗಣನೀಯ ಬದಲಾವಣೆಗಳಾಗುತ್ತಿದೆ. ಯುವಶಕ್ತಿ ಖಂಡಿತವಾಗಿಯೂ ಎಲ್ಲರ ನಿರೀಕ್ಷೆಯ ಆ ಬಲಾಡ್ಯತೆಯನ್ನ ಕಳೆದುಕೊಳ್ಳುತ್ತಿದೆ...

ಮೂರನೆಯದಾಗಿ ಆಡಳಿತ ವ್ಯವಸ್ಥೆ, ವ್ಯಾಪಾರ ವ್ಯವಹಾರಗಳು ಅಥವಾ ವೃತ್ತಿಗಳು ಎಲ್ಲವೂ ಕೂಡ ಹಣ ಕೇಂದ್ರೀಕೃತವಾಗಿ ಕೆಟ್ಟ ಅನಾರೋಗ್ಯಕಾರಿ ಸ್ಪರ್ಧೆ ಹೆಚ್ಚಾಗಿ ಗುಣಮಟ್ಟವೂ ಸಹ ನಿರಂತರವಾಗಿ ಕುಸಿಯುತ್ತಿದೆ. ಹಣವೇ ಪ್ರಾಧಾನ್ಯತೆ ಹೊಂದಿರುವುದರಿಂದ ಸಹಜವಾಗಿಯೇ ಗ್ರಾಹಕ ಸಂಸ್ಕೃತಿ ತಲೆ ಎತ್ತಿ ಜನರ ಹಿತಾಸಕ್ತಿ ಸಂಪೂರ್ಣ ಕಡೆಗಣಿಸಲಾಗಿದೆ...

ನಾಲ್ಕನೆಯದಾಗಿ ಮಾನವೀಯ ಮೌಲ್ಯಗಳು ಅಂದರೆ ಪ್ರೀತಿ, ಸಹಕಾರ, ಸಂಯಮ, ಸಭ್ಯತೆ, ತಾಳ್ಮೆ, ಕ್ಷಮಾಗುಣ, ಕರುಣೆ ಈ ಎಲ್ಲವೂ ಕೂಡ ವ್ಯಾಪಾರಿಕರಣವಾಗಿ ಮನುಷ್ಯ ಸಂಬಂಧಗಳು ಆ ಗಟ್ಟಿತನವನ್ನು, ಆ ಆತ್ಮೀಯತೆಯನ್ನು, ಆ ಪ್ರೀತಿಯನ್ನು ಕಳೆದುಕೊಳ್ಳುತ್ತಿವೆ. ಇದಕ್ಕೆ ಮೂಲ ಕಾರಣ ಕೇವಲ ಆರ್ಥಿಕ ಅಭಿವೃದ್ಧಿಯನ್ನು ಸಾಧಿಸುವುದೇ ಮುಖ್ಯ ಗುರಿಯಾಗಿರುವುದರಿಂದ.

ಇದರ ಜೊತೆಗೆ ಐದನೆಯದಾಗಿ ಈ ಐದು ಟ್ರಿಲಿಯನ್ ಆರ್ಥಿಕತೆಯನ್ನು ಸಾಧಿಸಬೇಕಾದರೆ ತೆರಿಗೆಗಳು ಎಲ್ಲಾ ರೀತಿಯ ತೆರಿಗೆಗಳನ್ನು ಸಹ ಹೆಚ್ಚು ಮಾಡಲೇಬೇಕಾಗಿದೆ. ಬೆಲೆ ಏರಿಕೆ ಹೆಚ್ಚು ಆಗಲೇಬೇಕು, ಮಧ್ಯಪಾನದ ಅಥವಾ ಆ ರೀತಿಯ ಅಮಲಿನ ಪದಾರ್ಥಗಳ ಬೆಳವಣಿಗೆಯನ್ನು ತಡೆಯುವುದು ಕಷ್ಟವಾಗುತ್ತದೆ, ಆನ್ಲೈನ್ ಗೇಮಿಂಗ್ ಅಥವಾ ಜೂಜು ಕ್ರೀಡೆಗೂ ಸಹ ಮಾನ್ಯತೆ ಕೊಡಬೇಕಾಗುತ್ತದೆ. ಶ್ರಮಪಟ್ಟು ಅಥವಾ ಮೌಲ್ಯಯುತವಾಗಿ ಐದನೆಯ ಸ್ಥಾನಕ್ಕೆ ಬರಬೇಕೆಂದರೆ ಈಗಿನ ಜಾಗತೀಕರಣದ ಸ್ಥಿತಿಯಲ್ಲಿ ಅಷ್ಟು ಸುಲಭವಲ್ಲ. ಮನುಷ್ಯರನ್ನು ಗ್ರಾಹಕರು ಎಂದು ಭಾವಿಸಿಯೇ ಸಾಮಾನ್ಯ ಜನರನ್ನು ಹೆಚ್ಚು ಗೊಂದಲಗೊಳಿಸುವ ಅಥವಾ ಶೋಷಿಸುವ ಮೂಲಕ ಈ ಅಭಿವೃದ್ಧಿ ಸಾಧಿಸಬೇಕಾಗುತ್ತದೆ. ಇದು ಎಷ್ಟರಮಟ್ಟಿಗೆ ದೇಶದ ಸುಸ್ಥಿರ ಹಿತಾಸಕ್ತಿಯನ್ನು ಕಾಪಾಡುತ್ತದೆ ಎನ್ನುವ ಪ್ರಶ್ನೆ ನಮ್ಮನ್ನು ನಾವೇ ಕೇಳಿಕೊಳ್ಳಬೇಕು.....





ಶಿಕ್ಷಣ ಮತ್ತು ಆರೋಗ್ಯ ಈ ದೇಶದಲ್ಲಿ ತಲುಪುತ್ತಿರುವ ಸ್ಥಿತಿಯನ್ನು ನೋಡಿದರೆ ಭವಿಷ್ಯ ನಿಜಕ್ಕೂ ಆತಂಕವನ್ನು ಉಂಟುಮಾಡುತ್ತದೆ. ಶಿಕ್ಷಣ ಸಂಪೂರ್ಣ ವ್ಯಾಪಾರಿಕರಣವಾಗಿದೆ, ಶೈಕ್ಷಣಿಕ ಗುಣಮಟ್ಟ ಬಹುತೇಕ ಅಂಕಗಳನ್ನೇ ಆಧರಿಸಿ ಮುನ್ನಡೆಯುತ್ತಿದೆ, ಈ ಸ್ಪರ್ಧಾತ್ಮಕ ಪರೀಕ್ಷೆಗಳು ಯುವಕರಲ್ಲಿ ಹತಾಶ ಮನೋಭಾವವನ್ನು ಅಥವಾ ಅಸಹಾಯಕತೆಯನ್ನು ಸೃಷ್ಟಿ ಮಾಡಿ ಅವರನ್ನು ಬಲಿಪಶುಗಳನ್ನಾಗಿ ಮಾಡುತ್ತಿದೆ. ಅದಕ್ಕೆ ಒಂದು ಸಣ್ಣ ಉದಾಹರಣೆ ಎಂದರೆ ರಾಜಸ್ಥಾನದ ಕೋಟಾದಲ್ಲಿ ನೀಟ್ ಪರೀಕ್ಷೆಗೆ ಸಿದ್ಧವಾಗಲು ಓದುತ್ತಿರುವ ವಿದ್ಯಾರ್ಥಿಗಳ ಆತ್ಮಹತ್ಯೆ ಘಟನೆಗಳನ್ನು ನೋಡಿದಾಗ ಇದು ಇತರ ಪ್ರದೇಶಗಳಿಗೂ ಹರಡಬಹುದೇನೋ ಅನ್ನುವ ಅನುಮಾನ ಉಂಟಾಗುತ್ತದೆ.

ಇನ್ನು ಆರೋಗ್ಯ ಕ್ಷೇತ್ರ ಊಹೆಗೂ ನಿಲುಕದಂತೆ ಬೆಳವಣಿಗೆ ಮತ್ತು ಅಧಃಪತನ ಏಕಕಾಲದಲ್ಲಿ ಉಂಟಾಗುತ್ತಿದೆ. ವಿಪರೀತ ಜನಸಂಖ್ಯೆ ಹಾಗೆ ವಿವಿಧ ಅನಾರೋಗ್ಯಗಳು ಅದೇ ಸಮಯದಲ್ಲಿ ಮನುಷ್ಯರು ಆಸ್ಪತ್ರೆಗಳಿಗೂ ಸಹ ಗ್ರಾಹಕರೇ ಆಗುತ್ತಿದ್ದಾರೆ. ರೋಗಿಗಳಿಗಿಂತ ಹೆಚ್ಚಾಗಿ ಗ್ರಾಹಕ ಸಂಸ್ಕೃತಿ ಆಸ್ಪತ್ರೆ ಮತ್ತು ಶಾಲೆಗಳಲ್ಲಿ ಸೃಷ್ಟಿಯಾದರೆ ನಿಜಕ್ಕೂ ಈ ನೆಲಕ್ಕೆ ಅದನ್ನು ಅರಗಿಸಿಕೊಳ್ಳುವುದು ತುಂಬಾ ಕಷ್ಟ.

ಮನುಷ್ಯನ ಅಥವಾ ಸಮಾಜದ ಅಥವಾ ದೇಶದ ಯಾವುದೇ ಅಭಿವೃದ್ಧಿ ಆತನ ಜೀವನ ಮಟ್ಟವನ್ನು ಹೆಚ್ಚಿಸುವಂತಿರಬೇಕು, ಆತನ ಸಂತೋಷ ನೆಮ್ಮದಿ ಉತ್ತಮವಾಗಿರುವಂತಿರಬೇಕು, ಅಸಮಾಧಾನ, ಅತೃಪ್ತಿ, ಅನಾರೋಗ್ಯ ಖಂಡಿತವಾಗಿಯೂ ದೇಶ ವಿಶ್ವಮಟ್ಟದಲ್ಲಿ ಆರ್ಥಿಕತೆವಾಗಿ ಮೂರನೇ ಸ್ಥಾನಕ್ಕೆ ತಲುಪಿದರು ಸಹ ಅಂತಹ ದೊಡ್ಡ ಪ್ರಯೋಜನವಾಗುವುದಿಲ್ಲ. ಅಧಿಕೃತವಾಗಿ ಹೆಸರಿಗೆ ಒಂದು ಸಾಧನೆ ಆಗಬಹುದೇ ಹೊರತು ಆಳದಲ್ಲಿ ಅದರಿಂದ ದುಷ್ಪರಿಣಾಮಗಳು ಹೆಚ್ಚು.

ಹಾಗೆಂದು ನಿರಾಶರಾಗಬೇಕಿಲ್ಲ. ಆದರೆ ಈ ಆರ್ಥಿಕ ಅಭಿವೃದ್ಧಿಯ ಜೊತೆ ಈಗ ವಿನಾಶದ ಅಂಚಿನಲ್ಲಿರುವ ಪರಿಸರ, ಪ್ರಜಾಪ್ರಭುತ್ವ, ಮಾನವೀಯ ಮೌಲ್ಯಗಳ ಬಗ್ಗೆ ಹೆಚ್ಚು ಗಮನ ಹರಿಸಬೇಕು. ವ್ಯಾವಹಾರಿಕವಾಗಿ ಕೇವಲ ಲಾಭ ಚಿಂತನೆ ಮಾಡಬಹುದು. ಆದರೆ ಅದರಲ್ಲಿ ದ್ರೋಹ ಚಿಂತನೆ ಅಥವಾ ವಂಚನೆ ಇರಬಾರದು. ಗ್ರಾಹಕ ಸಂಸ್ಕೃತಿಗಿಂತ ನಾಗರಿಕ ಸಂಸ್ಕೃತಿ ಮುಖ್ಯವಾಗಬೇಕು....ಪ್ರಬುದ್ಧ ಮನಸ್ಸು ಪ್ರಭುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ.

# ಮನೆಯಿಂದ ಸಂಸ್ಕಾರ ಕಲಿತು ಬಂದ ಮಗು ಶಿಕ್ಷಣದಲ್ಲಿ ದಾಪುಗಾಲು ಹಾಕುತ್ತದೆ: ಕಿರಣ್

» **ಹೊಸದುರ್ಗ**

ಶಾಲೆಗಳಲ್ಲಿ ಮಕ್ಕಳ ಮನಸ್ಸು ಅರಳುವಂತಹ ಕಾರ್ಯಕಮಗಳನ್ನು ಮಾಡಬೇಕು, ಜಾನಪದ ನಲೆಗಟ್ಟಿನಲ್ಲಿ ಮಕ್ಕಳ ನೃತ್ಯಗಳು ಹಾಡುಗಾರಿಕೆ ಇದ್ದರೆ ಮಕ್ಕಳಲ್ಲಿ ಸಂಸ್ಕೃತಿ ತಾನಗೆ ಮೂಡಿ ಬರುತ್ತದೆ,ಸಂಸ್ಕೃತಿ ಭಾರತೀಯ ಪರಂಪರೆ ಅರ್ಥವಾಗುತ್ತದೆ ಎಂದು ಜನರಲ್ ಕಾರಿಯಪ್ಪ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಆಡಳಿತಾಧಿಕಾರಿ ಕಿರಣ್‌ಕುಮಾರ್ ಅಭಿಪ್ರಾಯಿಸಿದರು.

ಪಟ್ಟಣದ ಜನರಲ್ ಕಾರಿಯಪ್ಪ ಪ್ರಾಥಮಿಕ ಮತ್ತು ಪ್ರೌಢಶಾಲೆಯ ವತಿಯಿಂದ ಪಟ್ಟಣದ ಗಣೇಶ ಸದನದಲ್ಲಿ ಆಯೋಜಿಸಲಾಗಿದ್ದ ಶಾಲಾ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಎಲ್ಲರಿಗೂ ಶಿಕ್ಷಣ ಬೇಕು,ಮನಷ್ಯ ತನ್ನ ಸಾಧನೆಯ ಗುರಿ ತಲುಪಬೇಕಾದರೆ ಒಳ್ಳೆಯ ಶಿಕ್ಷಣ ಬೇಕು, ಮಕ್ಕಳು ಸಮಾಜ ಮುಖಿಯಾಗಿ ಬೆಳೆಯಬೇಕು, ಸಮಾಜದಲ್ಲಿ ಉನ್ನತ ಸ್ಥಾನದಲ್ಲಿ ಇರಬೇಕು,ಆದರ್ಶವಾಗಿ ಬಾಳಬೇಕು ಎಂಬುದು ಎಲ್ಲಾ ತಂದೆ ತಾಯಿಗಳ ಕನಸು ಈ ನಿಟ್ಟಿನಲ್ಲಿ ಪೋಷಕರು



ಹಾಗೂ ಶಿಕ್ಷಕರು ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನ ತುಂಬಬೇಕು ಜ್ಞಾನಕ್ಕಿಂತ ಮಿಗಿಲಾದದ್ದು ಯಾವುದೂ ಇಲ್ಲಾ,ಮಾನವನ ಜೀವನದಲ್ಲಿ ಬಹು ಪ್ರಮುಖವಾದ ಕೆಲಸವನ್ನ ಮಾಡುತ್ತದೆ,ಶಾಲೆ ವಿದ್ಯೆ ಕಲಿಸುವ ತಣವಾದರೆ ಮನೆ ಬುದ್ದಿ ಕಲಿಸುವ ತಾಣವಾಗಿರುತ್ತದೆ ಎಂದು ಅಭಿಪ್ರಾಯಿಸಿದರು.

ಮನೆಯಿಂದ ಸಂಸ್ಕಾರ ಕಲಿತು ಬಂದ ಮಗು ಶಿಕ್ಷಣದಲ್ಲಿ ದಾಪುಗಾಲು ಹಾಕುತ್ತದೆ,ತಾಯಿ ಪ್ರೀತಿಯ ಸಂಕೇತ ತಂದೆ ಜವಾಬ್ದಾರಿಯ ಸಂಕೇತ ಕುಟುಂಬದಲ್ಲಿ ತಂದೆ ತಾಯಿಯ ಪಾತ್ರ ಅತ್ಯಂತ ಪ್ರಮುಖವಾದದ್ದು ಎಂದು ತಿಳಿಸಿದ ಅವರು ಮಕ್ಕಳ ಬಗ್ಗೆ ಅತಿಯಾದ ವ್ಯಾಮೋಹ ಹಾಗೂ ನಿರೀಕ್ಷೆ ಇಡುವುದು ತಪ್ಪು ಎಂದು ಅಭಿಪ್ರಾಯಿಸಿದ ಅವರು ಮೋಬೈಲ್ ಗೀಳಿನಿಂದ ಮಕ್ಕಳನ್ನು ಹೊರತನ್ನಿ ಎಂದು ಕಿವಿ ಮಾತು ಹೇಳಿದರು.

ಮುಖ್ಯ ಶಿಕ್ಷಕ ಪುಂಡಲೀಕ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಶಿಕ್ಷಣ ಸಂಯೋಜಕಿ ಸುಜಾತ, ಗಣಿತ ಶಿಕ್ಷಕ ಸತೀಶ್ ಸೇರಿದಂತೆ ಮತ್ತಿತತರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T